ವಿಜಯಪುರ | ಸಂಪುಟ 02 | ಸಂಚಿಕೆ 130 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಮಂಗಳವಾರ, ಜುಲೈ 16, 2024



“ಕನ್ನಡ ಚಿತ್ರರಂಗದ ಮೇರು ನಟ ಶಂಕರ್ ನಾಗ್ ಹಾಗೂ ಕನ್ನಡಿಗರ ಮನದಲ್ಲಿ ಅಚ್ಚಳಿಯದೆ ಉಳಿದಿರುವ ನಟಿ, ನಿರೂಪಕಿ ಅಪರ್ಣಾ ಅವರ ಹೆಸರುಗಳನ್ನು ಬೆಂಗಳೂರು ಮೆಟ್ರೋ ನಿಲ್ದಾಣಗಳಿಗೆ ಸರ್ಕಾರ ನಾಮಕರಣ ಮಾಡಲಿ”

– ಬಸನಗೌಡ ಪಾಟೀಲ, ಯತ್ನಾಳ
ಬಿಜೆಪಿ ಶಾಸಕರು, ವಿಜಯಪುರ

ಮಹರ್ಷಿ ವಾಲ್ಮೀಕಿ ಪ್ರತಿಮೆ ಬಳಿ ಧರಣಿ, ಪ್ರತಿಭಟನೆ | ವಿಧಾನಸಭೆಯ ಒಳಗೆ–ಹೊರಗೆ ಹೋರಾಟ ಮುಂದುವರಿಕೆ | ಸಿಬಿಐ ತನಿಖೆಗೆ ಆಗ್ರಹ

# ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರ ವಿರುದ್ಧ ಬಿಜೆಪಿ ಪ್ರತಿಭಟನೆ!

ಬೆಂಗಳೂರು: ಮುಡಾ ಹಗರಣ, ವಾಲ್ಮೀಕಿ ನಿಗಮದ ಹಗರಣ, ಖಅ/ಖಖಿ ನಿಧಿ ಬಳಕೆ, ವಕ್ಫ್ ಬೋರ್ಡ್ ಹಗರಣದ ವಿಚಾರವಾಗಿ ರಾಜ್ಯಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆ ನಡೆಸಿದ್ದು, ರಾಜ್ಯದಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆಯುತ್ತಿದೆ ಎಂದು ಆರೋಪಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ವಿರುದ್ಧ ಕರ್ನಾಟಕದಲ್ಲಿ ಪ್ರತಿಪಕ್ಷ ಬಿಜೆಪಿ ಶಾಸಕರು ಸೋಮವಾರ ಪ್ರತಿಭಟನೆ ನಡೆಸಿದ್ದು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮತ್ತು ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ ನೇತೃತ್ವದಲ್ಲಿ ಶಾಸಕರು ತುಂತುರು ಮಳೆಯ ನಡುವೆಯೇ ವಿಧಾನಸೌಧದ ಬಳಿಯ ಮಹರ್ಷಿ ವಾಲ್ಮೀಕಿ ಪ್ರತಿಮೆ ಬಳಿ ಧರಣಿ ಪ್ರತಿಭಟನೆ ನಡೆಸಿದರು.

ಸರ್ಕಾರವನ್ನು ಖಂಡಿಸುವ ಬ್ಯಾನರ್‌ಗಳೊಂದಿಗೆ ಮೆರವಣಿಗೆಯನ್ನೂ ನಡೆಸಿದ ನಾಯಕರು, ಘೋಷಣಾ ಫಲಕಗಳನ್ನು ಹಿಡಿದು ಕಾಂಗ್ರೆಸ್ ಸರ್ಕಾರವನ್ನು ಖಂಡಿಸಿ ಘೋಷಣೆಗಳನ್ನು ಕೂಗಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ವಿಜಯೇಂದ್ರ, “ಸರ್ಕಾರ ದಲಿತರು ಮತ್ತು ಪರಿಶಿಷ್ಟ ಪಂಗಡಗಳ ವಿರುದ್ಧವಾಗಿದೆ. ಕರ್ನಾಟಕ ವಿಧಾನಸಭೆಯ ಒಳಗೆ ಮತ್ತು ಹೊರಗೆ ಬಿಜೆಪಿ ಇದರ ವಿರುದ್ಧ ತನ್ನ ಹೋರಾಟವನ್ನು ಮುಂದುವರೆಸುತ್ತದೆ.





ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ 187 ಕೋಟಿ ರೂ. ಹಗರಣದ ತನಿಖೆಯಿಂದ ಲೋಕಸಭೆ ಚುನಾವಣೆಯಲ್ಲಿ ಹಣ ದುರ್ಬಳಕೆಯಾಗಿರುವುದು ಬೆಳಕಿಗೆ ಬಂದಿದೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕುಟುಂಬ ಶಾಮೀಲಾಗಿದೆ ಎಂದು ಕಿಡಿಕಾರಿದರು.

ಮುಡಾ ಹಗರಣದಲ್ಲಿ ದಲಿತರು, ಪರಿಶಿಷ್ಟ ಪಂಗಡಗಳು ಮತ್ತು ಆರ್ಥಿಕವಾಗಿ ದುರ್ಬಲ ವರ್ಗದವರಿಗೆ ಮೀಸಲಾಗಿದ್ದ ಸಾವಿರಾರು ಕೋಟಿ ರೂಪಾಯಿ ಮೌಲ್ಯದ ನಿವೇಶನಗಳನ್ನು ದೊಡ್ಡವರು ಕಬಳಿಸಿದ್ದಾರೆ. ಮುಡಾ ಹಗರಣದ ತನಿಖೆಗಾಗಿ ಹೈಕೋರ್ಟ್‌ನ ನಿವೃತ್ತ ನ್ಯಾಯಾಧೀಶ ನ್ಯಾಯಮೂರ್ತಿ ಪಿ ಎನ್ ದೇಸಾಯಿ ಅವರ ತನಿಖಾ ಆಯೋಗವನ್ನು ರಚಿಸುವ ರಾಜ್ಯ ಸರ್ಕಾರದ ಆದೇಶವನ್ನು ಬಿಜೆಪಿ ಒಪ್ಪುವುದಿಲ್ಲ. ನಮಗೆ ಸಿಬಿಐ ತನಿಖೆ ಮಾತ್ರ ಬೇಕು, ಸಿಬಿಐ ತನಿಖೆ ನಡೆಸಿದರೆ ಸತ್ಯಾಂಶ ಹೊರಬರುತ್ತದೆ ಎಂಬುದು ಮುಖ್ಯಮಂತ್ರಿಗೆ ಗೊತ್ತಿದೆ. ಹೀಗಾಗಿ ಅವರು ಅದಕ್ಕೆ ಒಪ್ಪುತ್ತಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಹೇಳಿದರು.

## ರಾಜ ನುಡಿ

ಚಹಾ ಸೋಸಿ ಕುಡಿಯುವ ಹಾಗೆ ನೀರನ್ನು ಫಿಲ್ಟರ್ ಮಾಡುವ ಹಾಗೆ ಒಳ ಬರುವ ಮತ್ತು ಹೊರ ಹೋಗುವ ವಿಚಾರಗಳನ್ನು ಸೋಸಿ ಫಿಲ್ಟರ್ ಮಾಡುವದಾಗಿದ್ದರೆ ಸಮಾಜದ ಚಿತ್ರಣವೇ ಬದಲಾಗಿರುತ್ತಿತ್ತು..

–ಡಾ. ರಾಜಶೇಖರ ನಾಗೂರ



## ವಚನ ಚಿಂತನ

*ಕಾಲ ಕೈಯೊಳಗಿರಿಸಿ ನಡೆವಾತನ ನಡೆ ಶುದ್ಧ.*
*ಕೈಯ ಕಣ್ಣೊಳಗಿರಿಸಿ ನೋಡುತ್ತಿಪ್ಪಾತನ ನೋಟ ಶುದ್ಧ.*
*ಆ ಕಣ್ಣ ಮನದೊಳಗಿರಿಸಿ ನೆನೆವುತ್ತಿಪ್ಪಾತನ ಮನ ಶುದ್ಧ,*
*ಆ ಮನವ ಭಾವದೊಳಗಿರಿಸಿ ಭಾವಿಸುತ್ತಿಪ್ಪಾತನ ಭಾವ ಶುದ್ಧ.*
*ಆ ಭಾವವು ನಿರ್ಭಾವವನೆಯ್ದಿ ನಿರವಯಲಾದರೆ, ಆತ ಸ್ವತಂತ್ರ ಶರಣ.*
*ನಿಜಗುರು ಸ್ವತಂತ್ರಸಿದ್ಧಲಿಂಗೇಶ್ವರನಲ್ಲಿ,ಒಂದಾದ ಲಿಂಗೈಕ್ಯನು.*

ಸ್ವತಂತ್ರ ಸಿದ್ದಲಿಂಗೇಶ್ವರರು ಈ ವಚನದ ಮೂಲಕ ಬಹಿರಂಗದ ಶುಚಿತ್ವವು ಅಂತರಂಗದ ಶುಚಿತ್ವವನ್ನು ಹೇಗೆ ಪರಿವರ್ತಿಸುತ್ತದೆ ಎಂಬುದನ್ನು ವಿವರಿಸಿದ್ದಾರೆ.”ಕಾಲ ಕೈಯೊಳಗಿರಿಸಿ ನಡೆವಾತನ ನಡೆ ಶುದ್ಧ” ಇಲ್ಲಿ ಕಾಲವೆಂಬುದು ಆಚಾರವನ್ನು ಕೈ ಎಂಬುದು ಅರಿವನ್ನು ಸೂಚಿಸುತ್ತದೆ.ಅರಿತು ಆಚರಿಸುವವನ ನಡೆ ಶುದ್ಧವಾಗಿರುತ್ತದೆ ಎಂಬುದು ಇದರ ಅರ್ಥ."ಕೈಯ ಕಣ್ಣೊಳಗಿರಿಸಿ ನೋಡು ತ್ತಿಪ್ಪಾತನ ನೋಟ ಶುದ್ಧ”ಅರಿವಿನ ಕಣ್ಣೋಟವೂ ಸಹ ಶುದ್ಧವಾಗಿರುತ್ತದೆ. ಅರಿವಿಲ್ಲದ ನೋಟದ ಮೂಲಕ ಅರ್ಥೈಸಿಕೊಳ್ಳುವುದು ಎಷ್ಟೊ ತಪ್ಪು ತಿಳುವಳಿ ಕೆಗೆ ಎಡೆಮಾಡಿಕೊಡುತ್ತದೆ.ನೋಟಶುದ್ಧವಾಗಿರಬೇಕಾದರೆ ಒಳಗಿನ ಅರಿವು ಶುದ್ಧವಾಗಿರಬೇಕು ಆಗ ಮಾತ್ರ ಎತ್ತನೋಡಿದರತ್ತ ನೀನೇ ದೇವ ಎನ್ನುವ ಭಾವ ಮೂಡಲು ಸಾಧ್ಯ.ಇಂತಹ ಬಹಿರಂಗದ ನೋಟದಿಂದ ಅಂತರಂಗದಲ್ಲಿ ಉಂಟಾ ಗುವ ಪರಿವರ್ತನೆಯನ್ನು ವಚನದ ಮುಂದಿನ ಸಾಲಿನಲ್ಲಿ ತಿಳಿಸಿದ್ದಾರೆ “ಆ ಕಣ್ಣ ಮನದೊಳಗಿರಿಸಿ ನೆನೆವುತ್ತಿಪ್ಪಾತನ ಮನ ಶುದ್ಧ,ಆ ಮನವ ಭಾವದೊಳಗಿರಿಸಿ ಭಾವಿಸುತ್ತಿಪ್ಪಾತನ ಭಾವ ಶುದ್ಧ” ಈ ವಿಧಾನದಲ್ಲಿ ಅಂತರಂಗ ಮತ್ತು ಬಹಿರಂಗವನ್ನು ಶುದ್ಧೀಕರಿಸಿಕೊಂಡ ಶರಣನ ಬಾವ, ನಿರ್ಭಾವದಿಂದ ನಿರವಯಲದೆಡೆಗೆ ಸಾಗುತ್ತದೆ ಕೊನೆಯದಾಗಿ ಮಹಾಲಿಂಗ ಜೊತೆಗೆ ಬೆರೆತುಹೋಗುವುದನ್ನು ಲಿಂಗೈಕ್ಯ ಸ್ಥಿತಿ ಎಂದಿದ್ದಾರೆ. ಇದನ್ನೇ ದೇಶಿಕೇಂದ್ರ ಸಂಗನಬಸವಣ್ಣನವರು ಅನು ಭವಿಸಿರುವುದಾಗಿ ತಮ್ಮ ವಚನದಲ್ಲಿ ತಿಳಿಸಿದ್ದಾರೆ.”ಕಾಲಿಲ್ಲದ ನಡೆ ಕಂಡೆನಯ್ಯಾ, ಕಂಗಳಿಲ್ಲದ ನೋಟವ ಕಂಡೆನಯ್ಯಾ. ತನುವಿಲ್ಲದ ಸೋಂಕ ಕಂಡೆನಯ್ಯಾ, ಮನವಿಲ್ಲದ ನೆನವ ಕಂಡೆನಯ್ಯಾ, ಭಾವವಿಲ್ಲದ ನಿರ್ವಯಲ ಕಂಡೆನಯ್ಯಾ,

ತಾನಿಲ್ಲದೆ ನೀನಾಗಿರ್ಪ ಸುಖವ ಗುರುನಿರಂಜನ ಚನ್ನಬಸವಲಿಂಗಾ ನಿಮ್ಮ ಶರಣನಲ್ಲಿ ಕಂಡೆನಯ್ಯಾ”ಶುದ್ಧತೆ ಅನುಭಾವದ ಮಾರ್ಗ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

ನಂದಿ ಕಾರ್ಖಾನೆಗೆ ಭೇಟಿ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ.ಪಾಟೀಲ ಭರವಸೆ

# ನಂದಿ ಸಹಕಾರಿ ಸಕ್ಕರೆ ಕಾರ್ಖಾನೆ ಉಳಿಸಲು ಶಕ್ತಿಮೀರಿ ಪ್ರಯತ್ನ

ಉದಯರಶ್ಮಿ ನ್ಯೂಸ್

ವಿಜಯಪುರ: ನಂದಿ ಸಹಕಾರಿ ಸಕ್ಕರೆ ಕಾರ್ಖಾನೆ ಉಳಿಸಿ ಈ ವರ್ಷದ ಹಂಗಾಮಿನಲ್ಲಿ ಕಬ್ಬು ನುರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಶಕ್ತಿಮೀರಿ ಪ್ರಯತ್ನಿಸುವುದಾಗಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಭರವಸೆ ನೀಡಿದ್ದಾರೆ.

ಬಬಲೇಶ್ವರ ತಾಲೂಕಿನ ಕೃಷ್ಣಾ ನಗರದಲ್ಲಿರುವ ನಂದಿ ಕಾರ್ಖಾನೆಗೆ ಶನಿವಾರ ಭೇಟಿ ನೀಡಿದ ಸಂದರ್ಭದಲ್ಲಿ ಉಪಸ್ಥಿತರಿದ್ದ ಇಲ್ಲಿನ ಕಾರ್ಮಿಕರು ಕಾರ್ಖಾನೆ ಉಳಿಸಿ ಎಂದು ಕೈಮುಗಿದು ಬೇಡಿಕೊಂಡ ಘಟನೆ ನಡೆಯಿತು. ಈ ಸಂದರ್ಭದಲ್ಲಿ ಅಲ್ಲಿದ್ದವರ ಕರುಳು ಚುರ್ ಎನಿಸಿ ಕಣ್ಣುಗಳು ತೇವಗೊಳ್ಳುವಂತೆ ಮಾಡಿದವು. ಅಷ್ಟೇ ಅಲ್ಲ, ಈ ಪ್ರಸಂಗ ಕಾರ್ಖಾನೆಯ ಪ್ರಸ್ತುತ ಪರಿಸ್ಥಿತಿಗೆ ಹಿಡಿದ ಕೈಗನ್ನಡಿಯಾಗಿತ್ತು.

ಈ ಸಂದರ್ಭದಲ್ಲಿ ಉಪಸ್ಥಿತಿರಿದ್ದ ರೈತರು, ಕಾರ್ಖಾನೆಯ ಆಡಳಿತ ಮಂಡಳಿ ಪದಾಧಿಕಾರಿಗಳು, ರೈತ ಮುಖಂಡರು ಮತ್ತು ಎಂಜಿನಿಯರಿಂಗ್ ಕಂಪನಿ ಅಧಿಕಾರಿಗಳಿಂದ ಪ್ರತ್ಯೇಕವಾಗಿ ಸಭೆ ನಡೆಸಿ ಮಾಹಿತಿ ಪಡೆದ ಸಚಿವರು, ಕಾರ್ಖಾನೆ ಪುನಾರಂಭದ ಹಲವಾರು ಮಾರ್ಗೋಪಾಯಗಳ ಕುರಿತು ಸುದೀರ್ಘ ಚರ್ಚೆ ನಡೆಸಿದರು.

ಈ ವೇಳೆ ಮಾತನಾಡಿದ ನಾನಾ ಮುಖಂಡರು, ಸಹಕಾರಿ ತತ್ವದಲ್ಲಿ ಪ್ರಾರಂಭವಾದ ನಂದಿ ಸಹಕಾರಿ ಸಕ್ಕರೆ ಕಾರ್ಖಾನೆ ಗಲಗಲಿ ಭಾಗದ ರೈತರ ಜೀವನಾಡಿಯಾಗಿದೆ. ಕಳೆದ 30 ವರ್ಷಗಳಿಂದ ನಮ್ಮೆಲ್ಲರ ಅಸ್ಮಿತೆಯಾಗಿದ್ದು, ಕೇವಲ ಜೋಳ, ಕಾಳು, ಕಡಿ, ಒಣ ಬೇಸಾಯಕ್ಕೆ ಸೀಮಿತರಾಗಿದ್ದ ಇಲ್ಲಿನ ರೈತರು ಕಾರ್ಖಾನೆ ಪ್ರಾರಂಭವಾದಾಗಿನಿಂದ ಕಬ್ಬು ಬೆಳೆಯುವ ಮೂಲಕ ಸಾಮಾಜಿಕ ಮತ್ತು ಆರ್ಥಿಕವಾಗಿ ಸುಧಾರಿಸುವಂತೆ ಮಾಡಿದೆ. ಆದರೆ, ಇತ್ತೀಚೆಗೆ ಪೈಪೋಟಿ, ಆಡಳಿತ ಮಂಡಳಿಯಲ್ಲಿ ವೃತ್ತಿಪರತೆ ಕೊರತೆ ಹಾಗೂ ಕೆಲವು ನ್ಯೂನ್ಯತೆಗಳಿಂದಾಗಿ ಕಾರ್ಖಾನೆ ಸಂಕಷ್ಟದ ಸುಳಿಗೆ ಸಿಲುಕಿದೆ. 2017 ಯೋಜನೆ ಐಜಾಕ್ ಪುಣೆ ಕಂಪನಿಗೆ ಅವಧಿಯಲ್ಲಿ ಕಾರ್ಯ ಆರಂಭಿಸದ ಕಾರಣ ಬಹುದೊಡ್ಡ ತೊಂದರೆಯಾಗಿದೆ ಎಂದು ಅಳಲು ತೋಡಿಕೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಕಾರ್ಖಾನೆ ಪುನಾರಂಭಿಸುವ ಕುರಿತು ಎಲ್ಲ ಕ್ರಮ ಕೈಗೊಳ್ಳಲಾಗುವುದು. ಮುಂದಿನ ಈ ವಾರ ಎಸ್. ಎಸ್. ಎಂಜಿನಿಯರ್ಸ್ ಅಧಿಕಾ–ಮಾಲಿಕ ಎಸ್. ಬಿ. ಬರ್ಡ್ ಅವರ ಜೊತೆ ಮೊಬೈಲಿನಲ್ಲಿ ಮಾತನಾಡಿದ ಸಚಿವರು, ಮುಂಬರುವ ಹಂಗಾಮಿನಲ್ಲಿ ಕಬ್ಬು ನು–ರಿಸಲು ಅನುಕೂಲ ಮಾಡಿಕೊಡಲು ಕೂಡಲೇ ಸಮಸ್ಯೆ ಬಗೆಹರಿಸಬೇಕು ಎಂದು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಬೀಳಗಿ ಶಾಸಕ ಜೆ. ಟಿ. ಪಾಟೀಲ, ಕಾರ್ಖಾನೆ ಉಪಾಧ್ಯಕ್ಷ ಎ. ಪಿ. ಲೆಂಕೆಣ್ಣವರ, ನಿರ್ದೇಶಕರಾದ ಎ. ಬಿ. ದೇಸಾಯಿ, ಬಿ. ಡಿ. ಪಾಟೀಲ, ಎಸ್. ಟಿ. ಪಾಟೀಲ ಲಿಂಗನೂರ, ಗುರಲಿಂಗಪ್ಪ ಅಂಗಡಿ, ರಮೇಶ ಜಕರಡ್ಡಿ, ಮುಖಂಡರಾದ ಕೆ. ಎಚ್. ಮುಂಬಾರೆಡ್ಡಿ, ಬಸವರಾಜ ದೇಸಾಯಿ, ಜಿ. ಡಿ. ದೇಸಾಯಿ, ಕಾಳಗಿ ಶೆಟ್ಟರ ಸುತ್ತಮುತ್ತ ಗ್ರಾಮಸ್ಥರು. ಎಸ್. ಎಸ್. ಎಂಜಿನಿಯರ್ ಯೋಜನೆ ಉಪಾಧ್ಯಕ್ಷ ಅನಿರುದ್ಧ ಕುಲಕರ್ಣಿ, ಕಾರ್ಖಾನೆಯ ಪ್ರದಾನ ವ್ಯವಸ್ಥಾಪಕರ ಜಯರಾಮ ಆಚಾರ್ಯ, ಪ್ರಭಾರ ವ್ಯವಸ್ಥಾಪಕ ಎಂ. ಬಿ. ಶೆಟ್ಟಿ, ಮುಖ್ಯ ಲೆಕ್ಕಾಧಿಕಾಧಿಕಾರಿ ಎಸ್. ಬಿ. ಗೋಟಖಿಂಡಿ ಸುತ್ತಮುತ್ತಲಿನ ಗ್ರಾಮಸ್ಥರು ಉಪಸ್ಥಿತರಿದ್ದರು.



ಬಾಯ್ಲರ್ ಪ್ಯಾಕೇಜ್ ಕಾಮಗಾರಿ ಗುತ್ತಿಗೆ ನೀಡಲಾಗಿತ್ತು. ಆದರೆ, ನಂತರ ಈ ಕಾಮಗಾರಿಯನ್ನು ಪುಣೆಯ ಎಸ್. ಎಸ್. ಎಂಜಿನಿಯರಿಂಗ್ ಕಂಪನಿಗೆ ನೀಡಿದ ನಂತರ 04.03.2023 ಬಾಯ್ಲರ್ ಇಎಸ್ಪಿ ಸ್ಫೋಟವಾಗಿ ಮೂರು ಜನ ಸಾವಿಗೀಡಾಗಿದ್ದಾರೆ. ಬಳಿಕ ಅದೇ ಕಂಪನಿ ಬಳಿಕ 04.07.2024 ಬಾಯಲರ್ ಪ್ರಥಮ ಇಎಸ್ಪಿ ಪ್ರಾಯೋಗಿಕವಾಗಿ ಪ್ರಾರಂಭ ಮಾಡಿತ್ತು. ಆದರೆ, 07.07.2024 ಇಎಸ್ಪಿ ಕುಸಿತವಾಗಿದೆ. ಇದರಿಂದಾಗಿ ರೈತರು ಮತ್ತು ಕಾರ್ಮಿಕರು ಕಾರ್ಖಾನೆಯ ಪುನಾರಂಭದ ಕುರಿತು ಭರವಸೆ ಕಳೆದುಕೊಂಡಿದ್ದಾರೆ. ಕಾರ್ಖಾನೆಯ ಸಾಮರ್ಥ್ಯ ವಿಸ್ತರಣ ಘಟಕ ನಿಗಧಿತ ರಿಗಳನ್ನು ಬೆಂಗಳೂರಿಗೆ ಕರೆಯಿಸಿ ಚರ್ಚಿಸಲಾಗುವುದು ಎಂದು ಭರವಸೆ ನೀಡಿದರು. ಈಗಾಗಲೇ ಸಚಿವರಾದ ಎಚ್. ಕೆ. ಪಾಟೀಲ, ಆರ್. ಬಿ. ತಿಮ್ಮಾಪುರ, ಶಾಸಕ ಜೆ. ಟಿ. ಪಾಟೀಲ, ಮಾಜಿ ಸಚಿವ ಅಜಯಕುಮಾರ ಸರನಾಯಕ ಮತ್ತಿತರ ಮುಖಂಡರೊಂದಿಗೆ ಸಿಎಂ ಭೇಟಿಯಾಗಿದ್ದು, ಕಾರ್ಖಾನೆಗೆ ನೆರವಾಗಲು ಮೃದುಸಾಲ ನೀಡುವಂತೆ ಮನವಿ ಸಲ್ಲಿಸಲಾಗಿದೆ ಎಂದು ಕಾರ್ಖಾನೆ ಪದಾಧಿಕಾರಿಗಳು, ಸಿಬ್ಬಂದಿ ಹಾಗೂ ಕಾರ್ಮಿಕರಿಗೆ ಧೈರ್ಯ ತುಂಬಿದರು.

ಅಲ್ಲದೇ, ಈ ಸಭೆಯಲ್ಲಿಯೇ ಪುಣೆಯ ಎಸ್. ಎಸ್. ಎಂಜಿನಿಯರ್ಸ್ ಕಂಪನಿಯ

ಪಂಚಮಸಾಲಿ ಸಮಾಜದ ಜಗದ್ಗುರು ಬಸವ ಜಯಮೃತ್ಯುಂಜಯ ಸ್ವಾಮೀಜಿ ಭವಿಷ್ಯ

# ಭವಿಷ್ಯದಲ್ಲಿ ಇನ್ನೂ ಉನ್ನತ ಹುದ್ದೆ ಅಲಂಕರಿಸಲಿರುವ ಸಂಗಮೇಶ

ಉದಯರಶ್ಮಿ ನ್ಯೂಸ್

ವಿಜಯಪುರ: ಸಂಗಮೇಶ ಬಬಲೇಶ್ವರ ಈ ನಾಡಿನ ಒಬ್ಬ ಸೃಜನಶೀಲ ಯುವ ನಾಯಕನಾಗಿದ್ದು, ಅವರಂಥ ಅತ್ಯುತ್ತಮ ವಾಗ್ಮಿ, ವಿದ್ಯಾವಂತ ವಿಧಾನ ಪರಿಷತ್ತಿನಲ್ಲಿ ಇರಬೇಕೆನ್ನುವುದು ಶ್ರೀಪೀಠದ ಆಶಯವಾಗಿತ್ತು. ಆದರೆ ಕರ್ನಾಟಕ ಘನ ಸರ್ಕಾರದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಾಗೂ ಸಚಿವರಾದ ಎಂ.ಬಿ ಪಾಟೀಲ, ಲಕ್ಷ್ಮಿ ಹೆಬ್ಬಾಳ್ಕರ್ ಅವರು, ಮಕ್ಕಳ ಬಗೆಗಿನ ಅವರ ಕಳಕಳಿಯನ್ನು ಗುರುತಿಸಿ ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ಅಧ್ಯಕ್ಷರನ್ನಾಗಿ ನೇಮಿಸಿದ್ದು ನಮ್ಮೆಲ್ಲರಿಗೂ ಸಂತೋಷವನ್ನುಂಟು ಮಾಡಿದೆ ಎಂದು ಪಂಚಮಸಾಲಿ ಸಮುದಾಯದ ಪ್ರಥಮ ಜಗದ್ಗುರು ಬಸವ ಜಯಮೃತ್ಯುಂಜಯ ಮಹಾಸ್ವಾಮೀಜಿ ಹರ್ಷ ವ್ಯಕ್ತಪಡಿಸಿದ್ದಾರೆ.

ಭಾನುವಾರ ತಮಗೆ ಸನ್ಮಾನಿಸಿ ಆಶೀರ್ವಾದ ಪಡೆದ ಪಂಚಮಸಾಲಿ ಸಮುದಾಯದ ರಾಷ್ಟ್ರೀಯ ವಕ್ತಾರರೂ ಆಗಿರುವ ಕರ್ನಾಟಕ ಬಾಲ ವಿಕಾಸ ಅಕಾಡೆಮಿ ನೂತನ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಅವರನ್ನು ಸನ್ಮಾನಿಸಿ, ಆಶೀರ್ವದಿಸಿ ಅವರು ಮಾತನಾಡಿದರು.



ಸಂಗಮೇಶ ಬಬಲೇಶ್ವರ ಈ ನಾಡಿನ ಭವಿಷ್ಯದ ಯುವ ನಾಯಕರಾಗಿದ್ದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಾಗೂ ಎಂ.ಬಿ ಪಾಟೀಲರು ಮುಂಬರುವ ದಿನಗಳಲ್ಲಿ ಅತ್ಯುತ್ತಮ ವಾಗ್ಮಿಯಾಗಿರುವ ಸಂಗಮೇಶ ಅವರಿಗೆ ವಿಧಾನಪರಿಷತ್ತಿಗೆ ಅವಕಾಶ ಮಾಡಿಕೊಡಬೇಕೆನ್ನುವುದು ನಮ್ಮೆಲ್ಲರ ಅಪೇಕ್ಷೆಯಾಗಿದೆ ಎಂದರು.

ಈ ಸಂದರ್ಭದಲ್ಲಿ ಪ್ರಥಮ ದರ್ಜೆ ಗುತ್ತಿಗೆದಾರರಾದ ಬಿ.ಎಸ್ ಬಿರಾದಾರ, ಮುಖಂಡರಾದ ಸೋಲಾಪುರ ಮೊದಲಾದವರು ಉಪಸ್ಥಿತರಿದ್ದರು.

ಗುಂಟೆವಾರು ನಿವೇಶನ ರಚಿಸಿ ಮಾರಾಟ ಮಾಡುವುದು ನಿಯಮ ಬಾಹಿರ | ನೀರಿನ ಸಂಪರ್ಕ–ವಿದ್ಯುತ್ ಸಂಪರ್ಕಕ್ಕೆ ಅನುಮತಿ ಇಲ್ಲ

# ಗುಂಟಾ ನಿವೇಶನ ರಚನೆ ಕಡಿವಾಣಕ್ಕೆ ಕಟ್ಟುನಿಟ್ಟಿನ ಕ್ರಮ :ಟಿ.ಭೂಬಾಲನ್

ಉದಯರಶ್ಮಿ ನ್ಯೂಸ್

ವಿಜಯಪುರ: ನಗರದಾದ್ಯಂತ ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದಿಂದ ಅನುಮೋದನೆ ಪಡೆಯದೆ ಕೆಲ ಭೂ ಮಾಲೀಕರು ತಮ್ಮ ಶೇತ್ಕಿ ಜಮೀನುಗಳನ್ನು ಖಾಸಗಿಯಾಗಿ ವಿಭಾಗಿಸಿ ಗುಂಟೆವಾರು ನಿವೇಶನಗಳನ್ನು ರಚಿಸಿ ಮಾರಾಟ ಮಾಡುವುದು ನಿಯಮ ಬಾಹಿರವಾಗಿದ್ದು, ಈ ರೀತಿಯ ಅನಧಿಕೃತ ಗುಂಟಾ ನಿವೇಶನಗಳ ನಿರ್ಮಾಣದ ಕಡಿವಾಣಕ್ಕೆ ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಸೂಚನೆ ನೀಡಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜರುಗಿದ ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಸರ್ಕಾರದಿಂದ ಅನುಮೋದನೆಯಾದ ಮಹಾಯೋಜನೆಯಲ್ಲಿ ಪ್ರಸ್ತಾಪಿಸಿರುವ ರಸ್ತೆಗಳಲ್ಲಿ ನಿವೇಶನ–ಕಟ್ಟಡಗಳನ್ನು ಹಾಗೂ ಅನಧಿಕೃತ ಗುಂಟಾ ನಿವೇಶನ ರಚನೆ ತಡೆಗಟ್ಟುವ ಕುರಿತ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಗುಂಟಾ ನಿವೇಶನ ಮಾಡುವ ಭೂ ಮಾಲೀಕರಿಗೆ ಹಲವು ಬಾರಿ ತಿಳುವಳಿಕೆ ನೀಡಿದರೂ ಸಹ ಗುಂಟಾ ನಿವೇಶನ ರಚನೆ ಕಂಡು ಬಂದಿದ್ದು, ಕಡಿವಾಣಕ್ಕೆ ಕಟ್ಟುನಿಟ್ಟಿನ ಕ್ರಮ ವಹಿಸುವಂತೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಅನಧಿಕೃತವಾಗಿ ನಿರ್ಮಾಣಗೊಂಡ ಬಡಾವಣೆಗಳ ನಿವೇಶನಗಳಿಗೆ ಕರ್ನಾಟಕ ನಗರ ನೀರು ಸರಬರಾಜು ಮಂಡಳಿ ವತಿಯಿಂದ ನೀರಿನ ಸಂಪರ್ಕ, ಹೆಸ್ಕಾಂ ವತಿಯಿಂದ ವಿದ್ಯುತ್ ಸಂಪರ್ಕ ಅಳವಡಿಸದೇ ತಡೆಹಿಡಿಯಬೇಕು. ಸಮರ್ಪಕ ದಾಖಲೆಗಳಿದ್ದರೆ ಮಾತ್ರ ಸೌಲಭ್ಯಗಳನ್ನು ಒದಗಿಸಲು ಕ್ರಮ ವಹಿಸಬೇಕು. ಸಾರ್ವಜನಿಕರು ಸಹ ದಾಖಲೆ ಇಲ್ಲದ ಅನಧಿಕೃತ ಗುಂಟಾ ನಿವೇಶನ ಖರೀದಿ ಮಾಡದೇ ನಗರ ಅಭಿವೃದ್ದಿಗೆ ಸಹಕರಿಸುವಂತೆ ಅವರು ಈ ಸಂದರ್ಭದಲ್ಲಿ ಮನವಿ ಮಾಡಿಕೊಂಡಿದ್ದಾರೆ.

ಸರ್ಕಾರದಿಂದ ಅನುಮೋದನೆಯಾದ ಮಹಾಯೋಜನೆಯ ರಸ್ತೆಗಳ ಸಮೀಕ್ಷೆ ನಡೆಸಿ, ಅತಿಕ್ರಮಣವಾದ ಜಾಗ ತೆರವುಗೊಳಿಸಿ ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ಮಹಾನರ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದ ಅವರು, ನಗರದ ವಿವಿಧೆಡೆ ರಸ್ತೆಗಳ ಮೇಲೆ ಅನಧಿಕೃತವಾಗಿ ನಿವೇಶನ ಹಾಗೂ ಕಟ್ಟಡಗಳನ್ನು ರಚಿಸುತ್ತಿರುವುದು ಕಂಡು ಬಂದಿದ್ದು, ಕೂಡಲೇ ತಡೆಗಟ್ಟಿ ಈ ಜಾಗವನ್ನು ತೆರವುಗೊಳಿಸುವ ಮೂಲಕ ಅತಿಕ್ರಮಣವಾಗದಂತೆ ನೋಡಿಕೊಳ್ಳಬೇಕು. ವಿಜಯಪುರ ನಗರದ ಯೋಜನಾ ಪ್ರದೇಶಕ್ಕೆ ಸರ್ಕಾರದಿಂದ ಅನುಮೋದನೆಯಾದ ಮಹಾಯೋಜನೆಯ ರಸ್ತೆಗಳ ಮೇಲೆ ಅನಧಿಕೃತವಾಗಿ ನಿವೇಶನ ಹಾಗೂ ಕಟ್ಟಡಗಳು ನಿರ್ಮಾಣವಾಗದಂತೆ ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವ–ರಿಷ್ಠಾಧಿಕಾರಿ ರಿಷಿಕೇಶ ಸೊನಾವಣೆ, ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ರಾಜಶೇಖರ ಡಂಬಳ, ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ವಿಜಯಪುರ ಉಪವಿಭಾಗಾಧಿಕಾರಿ ಬಸವಣೆಪ್ಪ ಕಲಶೆಟ್ಟಿ, ಇಂಡಿ ಉಪವಿಭಾಗಾಧಿಕಾರಿ ಆಬೀದ ಗದ್ಯಾಳ ಸೇರಿದಂತೆ ವಿವಿಧ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### ಹೊಂಡ ಬಿದ್ದು ಕಂಟಕವಾಗಿ ಕಾಡುತ್ತಿದೆ ದೇವಣಗಾಂವ-ಸೊನ್ನ ಸೇತುವೆ। ಮಣೂರ ಭುಂಯಾರ ಸೇತುವೆಗೆ ತಡೆಗೋಡೆ ಇಲ್ಲದ್ದಕ್ಕೆ ಆತಂಕ

# ಸೇತುವೆ ಸಮಸ್ಯೆಗಳಿಗೆ ಪರಿಹಾರ ನೀಡುವರೇ ತ್ರಿವಳಿ ಶಾಸಕರು?

**ಉದಯರಶ್ಮಿ ನ್ಯೂಸ್**
– ಮಲ್ಲಿಕಾರ್ಜುನ ಹಿರೇಮಠ

ಅಫಜಲಪುರ: ಒಂದು ಊರಿನಿಂದ ಇನ್ನೊಂದು ಊರಿಗೆ ಹೋಗಲು ಸುಗಮವಾದ ರಸ್ತೆ ಸಂಪರ್ಕವಿರಬೇಕು ಅದೇ ರೀತಿಯಲ್ಲಿ ಒಂದು ಹಳ್ಳ, ಹೊಳೆ, ನದಿಗಳನ್ನು ದಾಟಿ ಇನ್ನೊಂದು ಊರಿಗೆ ಹೋಗಲು ಸೇತುವೆಗಳು ಬೇಕಾಗುತ್ತದೆ. ಆದರೆ ಮೂರು ತಾಲೂಕುಗಳಿಗೆ ಸಂಬಂಧ ಪಟ್ಟ ಎರಡು ಸೇತುವೆಗಳು ಸಮಸ್ಯೆಯಾಗಿ ಕಾಡುತ್ತಿದ್ದು ತ್ರಿವಳಿ ಶಾಸಕರು ಸೇತುವೆಗಳ ಸಮಸ್ಯೆಗಳನ್ನು ಸರಿಪಡಿಸುವರೇ ಎನ್ನುವುದು ವಾಹನ ಸವಾರರು, ಸಾರ್ವಜನಿಕರ ಪ್ರಶ್ನೆಯಾಗಿದೆ.



"ಭೂಂಯಾರ, ಮಣೂರ ಮಧ್ಯದ ಸೇತುವೆ ತಡೆಗೋಡೆ ಇಲ್ಲದ್ದಕ್ಕೆ ಸ್ವಲ್ಪ ಮಟ್ಟಿನ ಸಮಸ್ಯೆ ಆಗುತ್ತಿದೆ. ಸೊನ್ನ ಬ್ಯಾರೇಜ್ ಎತ್ತರ ಹೆಚ್ಚಿಸಿದ್ದರಿಂದ ಭೂಂ-ಯಾರ್ ಸೇತುವೆ ಮುಳುಗಡೆ ಲೆಕ್ಕದಲ್ಲಿ ಬರುತ್ತದೆ ಹೀಗಾಗಿ ಅದಕ್ಕೆ ತಡೆಗೋಡೆ ಕಟ್ಟಿಸಲಾಗುತ್ತಿಲ್ಲ. ಆದರೂ ಪ್ರಯಾಣಿಕರ ಹಿತದೃಷ್ಟಿಯಿಂದ ಏನಾದರೂ ವ್ಯವಸ್ಥೆ ಮಾಡಿಸಲಾಗುತ್ತದೆ."
– ಯಶವಂತ್ರಾಯಗೌಡ ಪಾಟೀಲ್, ಇಂಡಿ ಶಾಸಕರು




ಹೊಂಡ ಬಿದ್ದು ಕಂಟಕವಾಗಿ ಕಾಡುತ್ತಿದೆ ದೇವಣಗಾಂವ ಸೊನ್ನ ಸೇತುವೆ: ಅಫಜಲಪುರ ತಾಲೂಕಿನ ಸೊನ್ನ ಹಾಗೂ ಆಲಮೇಲ ತಾಲೂಕಿನ ದೇವಣಗಾಂವ ಗ್ರಾಮಗಳ ಮಧ್ಯ ಭೀಮಾ ನದಿಗೆ ಅಡ್ಡಲಾಗಿ ದೊಡ್ಡ ಪ್ರಮಾಣದ ಸೇತುವೆ ನಿರ್ಮಿಸಲಾಗಿದೆ. ಈ ಸೇತುವೆ ಮೇಲಿನ ರಸ್ತೆ ಹದಗೆಟ್ಟಿದ್ದು ಎಲ್ಲೆಂದರಲ್ಲಿ ದೊಡ್ಡ ಹೊಂಡಗಳು ಬಿದ್ದಿವೆ. ಈ ಹೊಂಡ ಬಿದ್ದ ರಸ್ತೆಯಲ್ಲಿ ಸಂಚರಿಸುವುದು ವಾಹನ ಸವಾರ-ರಿಗೆ ಸವಾಲಾಗಿ ಪರಿಣಮಿಸಿದೆ. ಅಲ್ಲದೆ ಯಾವ ಸಂದರ್ಭದಲ್ಲಿ ಏನು ಅವಗಢ ಸಂಭವಿಸಲಿದೆಯೋ ತಿಳಿಯದಂತಾಗಿದೆ. ಸಿಂದಗಿ ತಾಲೂಕಿನ ವ್ಯಾಪ್ತಿಗೆ ಬರುವ ದೇವಣಗಾಂವ, ಅಫಜಲಪುರ ತಾಲೂಕಿನ ವ್ಯಾಪ್ತಿಗೆ ಬರುವ ಸೊನ್ನ ಮಧ್ಯ ಇರುವ ಈ ಸೇತುವೆ ಎರಡು ಜಿಲ್ಲೆಗಳ ಸಂಪರ್ಕ ಕೊಂಡಿಯಾಗಿಯೂ ನಿಂತುಕೊಂಡಿದೆ. ಇದನ್ನು ಕೂಡಲೇ ರಿಪೇರಿ ಮಾಡಿಸದಿದ್ದರೆ ಸಾಕಷ್ಟು ಸಮಸ್ಯೆಗಳಾಗುವುದಂತು ಪಕ್ಕಾ.



ಮಣೂರ ಭೂಂಯಾರ ಸೇತುವೆಗೆ ತಡೆಗೋಡೆ ಇಲ್ಲದ್ದಕ್ಕೆ ಆತಂಕ: ಇನ್ನೂ ಪಕ್ಕದ ಇಂಡಿ ತಾಲೂಕಿನ ಭೂಂಯಾರ ದಿಂದ ಅಫಜಲಪುರ ತಾಲೂಕಿನ ಮಣೂರ ಗ್ರಾಮದ ಮಧ್ಯ ಭೀಮಾ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಿಸಲಾಗಿದೆ. ಈ ಸೇತುವೆ ನಿರ್ಮಿಸಿ ಅನೇಕ ವರ್ಷಗಳು ಕಳೆದರೂ ಇದುವರೆಗೂ ಸೇತುವೆಗೆ ತಡೆಗೋಡೆ ನಿರ್ಮಿಸಿಲ್ಲ. ಇದರಿಂದಾಗಿ ವಾಹನ ಸವಾರರು ಜೀವ ಕೈಯಲ್ಲಿ ಹಿಡಿದು ಸಂಚ-ರಿಸುವಂತಾಗಿದೆ. ಮಳೆ ಹೆಚ್ಚಾಗಿ ನದಿಯಲ್ಲಿ ಪ್ರವಾಹ ಬಂದಾಗಲಂತೂ ಈ ಸೇತುವೆ ಭಯಂಕರವಾಗಿ ಕಾಣುತ್ತದೆ. ವಾಹನ ಸವಾರರು ಸ್ವಲ್ಪ ಮೈ ಮರೆತರೂ ಜೀವ ಹೋಗುವುದು ಪಕ್ಕಾ ಎನ್ನುವಂತಾಗಿದೆ.



"ಸೇತುವೆ ಮೇಲಿನ ರಸ್ತೆ ಹದಗೆಟ್ಟ ಕುರಿತು ಸಂಬಂಧ ಪಟ್ಟ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುತ್ತೇನೆ."
– ಅಶೋಕ ಮನಗೂಳಿ, ಸಿಂದಗಿ ಶಾಸಕರು



" ಸೊನ್ನ, ದೇವಣಗಾಂವ, ಭೂಂಯಾರ, ಮಣೂರ ಗ್ರಾಮಗಳ ನಡುವೆ ಇರುವ ಎರಡು ಸೇತುವೆಗಳ ರಿಪೇರಿ ಕುರಿತು ಇಂಡಿ, ಸಿಂದಗಿ ಶಾಸಕರೊಂದಿಗೆ ಚರ್ಚಿಸಿ, ಅಧಿಕಾರಿಗಳ ಜೊತೆಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ."
– ಎಂ.ವೈ ಪಾಟೀಲ್, ಅಫಜಲಪುರ ಶಾಸಕರು

ಒಟ್ಟಿನಲ್ಲಿ ಈ ಎರಡು ಸೇತುವೆಗಳು ಈಗ ರಿಪೇರಿ ಹಂತಕ್ಕೆ ಬಂದಿದ್ದು ಕೂಡಲೇ ಇಂಡಿ, ಸಿಂದಗಿ ಹಾಗೂ ಅಫಜಲಪುರ ಶಾಸಕರು ಮುತುವರ್ಜಿ ವಹಿಸಿ ಸೇತುವೆಗಳನ್ನು ಸರಿಪಡಿಸುವ ಕೆಲಸ ಮಾಡಬೇಕೆನ್ನುವುದು ವಾಹನ ಸವಾರರು, ಸಾರ್ವಜನಿಕರ ಒತ್ತಾಸೆಯಾಗಿದೆ.

### ಮಾದಕ ದ್ರವ್ಯ ನಿರ್ಮೂಲನೆ ಕುರಿತ ಜಿಲ್ಲಾ ಮಟ್ಟದ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚನೆ

# ಮಾದಕ ದ್ರವ್ಯ ನಿರ್ಮೂಲನೆಗೆ ಅರಿವು ಮೂಡಿಸಲು ಕ್ರಮ ವಹಿಸಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಮಾದಕ ದ್ರವ್ಯ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಿಗೆ ಹಾಗೂ ಶಾಲಾ-ಕಾಲೇಜಿನ ವಿದ್ಯಾರ್ಥಿಗಳಿಗೆ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅರಿವು ಮೂಡಿಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಸಮಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸೋಮವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಮಾದಕ ದ್ರವ್ಯ ನಿರ್ಮೂಲನೆ ಕುರಿತ ಜಿಲ್ಲಾ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಸಾರ್ವಜನಿಕ ಶಿಕ್ಷಣ ಇಲಾಖೆ, ಪದವಿಪೂರ್ವ ಶಿಕ್ಷಣ ಇಲಾಖೆ ತಮ್ಮ ವ್ಯಾಪ್ತಿಯ ಶಾಲಾ-ಕಾಲೇಜ್‌ಗಳ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜಾಗೃತಿ ಮೂಡಿಸಬೇಕು. ಮಾದಕ ದ್ರವ್ಯ ಸೇವನೆಯಿಂದಾಗುವ ದುಷ್ಪ-ರಿಣಾಮಗಳ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಉಪ ಅರಣ್ಯ ಸಂರಕ್ಷಣಾ ಇಲಾಖೆ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಅರಣ್ಯ ಪ್ರದೇಶದಲ್ಲಿ ಮಾದಕ ದ್ರವ್ಯ, ಗಾಂಜಾ ಸಸಿ-ಗಿಡಗಳು ಬೆಳೆಯದಂತೆ ಕಟ್ಟೆಚ್ಚರ ವಹಿಸಬೇಕು. ಗಾಂಜಾ ಗಿಡಗಳು ಕಂಡು ಬಂದಲ್ಲಿ ಕೂಡಲೇ ಸಂಬಂಧಿಸಿದ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕು. ಅಬಕಾರ ಇಲಾಖೆ ವ್ಯಾಪ್ತಿಯಲ್ಲಿ ಮಾದಕ ದ್ರವ್ಯ ಮಾರಾಟ ಮಾಡುವ-ಸಂಗ್ರಹಿಸುವವರ ಮೇಲೆ ತೀವ್ರ ನಿಗಾ ಇಡಬೇಕು. ಈ ಕುರಿತು ಮಾಹಿತಿ ದೊರೆಯಲ್ಲಿ ಸಂಬಂಧಿಸಿದ ಪೊಲೀಸ್ ಠಾಣೆಗೆ ಮಾಹಿತಿ ಒದಗಿಸಬೇಕು. ಔಷದ ನಿಯಂತ್ರಕ ಇಲಾಖೆ ಮಾದಕ ಅಂಶಗಳುಳ್ಳ ಔಷಧಿಯನ್ನು ಮಳಿಗೆಗಳಲ್ಲಿ ಕಡ್ಡಾಯವಾಗಿ ಅನುಮತಿ ಪಡೆದು ಮಾರಾಟಕ್ಕೆ ಅವಕಾಶ ಒದಗಿಸಬೇಕು. ಈ ಕುರಿತು ತೀವ್ರ ನಿಗಾ ಇಡುವಂತೆ ಅವರು ಸೂಚನೆ ನೀಡಿದರು.



ಪೊಲೀಸ್ ಇಲಾಖೆಯಿಂದ ಜಿಲ್ಲೆಯ ಕೆಲವು ಭಾಗಗಳಲ್ಲಿ ಪದೇ ಪದೇ ಮಾದಕ ವಸ್ತುಗಳ ಕುರಿತು ವರದಿಯಾದ ಪ್ರದೇಶಗಳ ಮೇಲೆ ತೀವ್ರ ಗಮನ ಹರಿಸಬೇಕು. ಶಾಲಾ ಆವರಣದಲ್ಲಿ ತಂಬಾಕು ಉತ್ಪನ್ನಗಳ ಮಾರಾಟ ನಿಷೇಧಿಸಿದ್ದು, ಮಾರಾಟ ಮಾಡುವವರ ಮೇಲೆ ತೀವ್ರ ನಿಗಾವಹಿಸಬೇಕು. ವಿವಿಧ ವಸತಿ ನಿಲಯಗಳಲ್ಲಿ ತಂಬಾಕು ಉತ್ಪನ್ನಗಳ ಬಳಕೆಯಾಗದಂತೆ ನೋಡಿಕೊಳ್ಳಬೇಕು. ವಸತಿ ನಿಲಯಗಳಲ್ಲಿ ಅನಧಿಕೃತ ವ್ಯಕ್ತಿಗಳು ಇರುವುದು ಕಂಡು ಬಂದಲ್ಲಿ ಸಂಬಂಧಿಸಿದ ನಿಲಯಪಾಲಕರ ಮೇಲೆ ನಿರ್ದಾಕ್ಷಿಣ್ಯವಾಗಿ ಕ್ರಮ ವಹಿಸಲಾಗುವುದು. ಈ ಕುರಿತು ವಸತಿ ನಿಲಯಗಳಲ್ಲಿ ನಿಯಮಿತವಾಗಿ ಭೇಟಿ ನೀಡಿ ಪರಿಶೀಲನೆ ನಡೆಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಿಷಿಕೇಶ ಸೋನಾವಣೆ ಅವರು ಮಾತನಾಡಿ, ಮಾದಕ ದ್ರವ್ಯ ನಿರ್ಮೂಲನೆಗಾಗಿ ಪೊಲೀಸ್ ಇಲಾಖೆ ಸನ್ನದ್ಧವಾಗಿದ್ದು, ಜಿಲ್ಲೆಯಾದ್ಯಂತ ಕಳೆದ 3 ವರ್ಷಗಳಲ್ಲಿ ಎನ್‌ಡಿಪಿಎಸ್ ಕಾಯ್ದೆಯಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿ ಕ್ರಮ ಕೈಗೊಳ್ಳಲಾಗಿದೆ. 238 ಕೆಜಿ 45 ಗ್ರಾಂ ಮಾದಕ ದ್ರವ್ಯಗಳನ್ನು ನಾಶಪಡಿಸಲಾಗಿದೆ ಎಂದು ಅವರು ಹೇಳಿದರು.

ಜಿಲ್ಲಾ ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಅಬಕಾರಿ ಇಲಾಖೆಯ ಉಪ ಆಯುಕ್ತ ಸಂಗನಗೌಡ, ಜಿಲ್ಲಾ ಶಸ್ತ್ರ ಚಿಕಿತ್ಸಕ ಶಿವಾನಂದ ಮಾಸ್ತಿಹೊಳಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಬಸವರಾಜ ಹುಬ್ಬಳ್ಳಿ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಎನ್.ಎಚ್.ನಾಗೂರ, ಲೋಕೋಪಯೋಗಿ ಇಲಾಖೆ ಕಾರ್ಯನಿರ್ವಾಹಕ ಅಭಿಯಂತರ ರಾಜು ಮುಜುಮದಾರ, ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗದ ಎನ್.ಎಂ.ಗಬಸಾವಳಗಿ, ಪ್ರಾದೇಶಿಕ ಸಾರಿಗೆ ಅಧಿಕಾರಿ ಆನಂದ ಪಾಥ-ರ್ನಳ್ಳಿ, ಹಿಂದುಳಿದ ವರ್ಗಗಳ ಇಲಾಖೆ ಅಧಿಕಾರಿ ಈರಣ್ಣ ಆಶಾಪುರ ಸೇರಿದಂತೆ ವಿವಿಧ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ನೂತನ ಎಂಎಲ್‌ಸಿ ಜಗದೇವ ಗುತ್ತೇದಾರ ಗೆ ಸನ್ಮಾನ

**ಉದಯರಶ್ಮಿ ನ್ಯೂಸ್**

ಅಫಜಲಪುರ: ನೂತನ ಎಂ-ಎಲ್‌ಸಿ ಜಗದೇವ ಗುತ್ತೇದಾರ ಅವ-ರಿಗೆ ಹಿರಿಯ ಕಾಂಗ್ರೆಸ್ ಮುಖಂಡ ರಾಜೇಂದ್ರಕುಮಾರ ಪಾಟೀಲ ಅವರು ಕಲಬುರಗಿಯಲ್ಲಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ಇದ್ದರು.



# ಸಂಭ್ರಮದ ಇಂಡಿಯ ಮೊಹರಮ್ ಆಟವಿ ಖತಾಲ

**ಉದಯರಶ್ಮಿ ನ್ಯೂಸ್**

ಇಂಡಿ: ಪಟ್ಟಣದಲ್ಲಿ ಹುಸೇನ ಬಾಷಾ ದೇವಸ್ಥಾನದಲ್ಲಿ ಸಂಭ್ರಮ ಸಡಗರದಿಂದ ಆಟವಿ ಖತಾಲ ಆಚರಿಸಲಾಯಿತು.

ಜಾತ್ರೆ ನಿಮಿತ್ಯ ಇಂಡಿ ಸೇ-ರಿದಂತೆ ಕಲಬುರಗಿ, ವಿಜಯಪುರ, ಸೋಲಾಪುರ, ಪುನಾ, ಮುಂಬಯಿ ಮತ್ತು ಮಹಾರಾಷ್ಟ್ರ ಆಂಧ್ರದಿಂದ ಅಂದಾಜು 15 ಸಾವಿರಕ್ಕೂ ಹೆಚ್ಚು ಭಕ್ತರು ಆಗಮಿಸಿ ತಮ್ಮ ಹರಕೆ ತೀರಿಸಿದರು.



ಹುಸೇನರು ಮಕ್ಕಾ ಮದೀನಾದ ಕರಬಲಾ ಮೈದಾನದಲ್ಲಿ ಹುತಾತ್ಮರಾದ ನಿಮಿತ್ಯ ಆಟವಿ ಖತಾಲ ಆಚರಿಸುವದು ಇಂಡಿಯ ಮೊಹರಮ್ ವಿಶೇಷ.

ಬೆಳಗ್ಗೆಯಿಂದ ಭಕ್ತಾದಿಗಳು ದರ್ಶನ ಮತ್ತು ನೈವೆದ್ಯ ಅರ್ಪಣೆಗೆ ಪ್ರಾರಂಭಿಸಿದ್ದರು. ಇಂಡಿಯ ದಾದಾಗೌಡರ ಮನೆ, ನಾಡಗೌಡ, ದೇಶಪಾಂಡೆ ಸೇರಿದಂತೆ ಅನೇಕ ಗಣ್ಯರ ಮನೆಯಿಂದ ನೈವೆದ್ಯ ಮೆರವಣಿಗೆಯಲ್ಲಿ ಬಂದು ಸಲ್ಲಿಸಿದರು.

ಕರಬಲ್, ಭಡಂಗ ಕುಣಿತ, ಡೊಳ್ಳು, ಹುಲಿಕುಣಿತ, ಸೇ-ರಿದಂತೆ ತಾಷಾ,ಬೆಂಡ ಒಳಗೊಂಡ ಕಾರ್ಯಕ್ರಮಗಳು ದೇವಸ್ಥಾನದ ಆವರಣದಲ್ಲಿ ನಡೆದವು.

ದರ್ಶನಕ್ಕೆ ಗದ್ದಲ ನಿಮಿತ್ಯ ಅರ್ಧ ಕಿ.ಮಿ ವರೆಗೂ ಸರದಿ ಮಾಡಲಾಗಿತ್ತು.

ಪೋಲಿಸ ಇಲಾಖೆ ಸಿಪಿಐ ರತನಕುಮಾರ ಜಿರಗಿಹಾಳ ಇವರ ನೇತೃತ್ವದಲ್ಲಿ ಬಿಗಿ ಬಂದೋಬಸ್ತ ಮಾಡಿದ ನಿಮಿತ್ಯ ಶಾಂತಿಯುತವಾಗಿ ಭಕ್ತರು ದರ್ಶನ ಪಡೆದರು.

ಮಂಗಳವಾರ ನಸುಕಿನ 4 ಗಂಟೆಯ ವರೆಗೂ ದರ್ಶನ ಮುಂದು ವರೆಯಲಿದ್ದು , ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಹಂಗರಗಿ ನೇತೃತ್ವದಲ್ಲಿ ಕುಡಿಯುವ ನೀರು ಮತ್ತು ಸ್ವಚ್ಛತೆಯ ವ್ಯವಸ್ಥೆ ಮಾಡಲಾಗಿತ್ತು.

ಮಹಾರಾಷ್ಟ್ರ ಮತ್ತು ಆಂಧ್ರದಿಂದ ಬಂದ ಭಕ್ತರಿಗೆ ದೇವಸ್ಥಾನದ ಆವರಣ ಮತ್ತು ಹಲವಾರು ಕಡೆ ಇರುವ ವ್ಯವಸ್ಥೆ ಮಾಡಲಾಗಿತ್ತು.

ಪುರಸಭೆ ಸದಸ್ಯ ಭೀಮನಗೌಡ ಪಾಟೀಲ, ಬಿಜೆಪಿ ಧುರೀಣ ಕಾಸುಗೌಡ ಬಿರಾದಾರ ಸೇರಿದಂತೆ ಅನೇಕ ಗಣ್ಯರು ಸರದಿಯಲ್ಲಿ ನಿಂತು ದರ್ಶನ ಪಡೆದದ್ದು ವಿಶೇಷವಾಗಿತ್ತು.


ಮಂಗಳವಾರ ಬೆಳಗ್ಗೆ ದೇವರ ಮೆರವಣಿಗೆ ನಗರದ ಪ್ರಮುಖ ಬೀದಿಗಳಲ್ಲಿ ನಡೆಯುತ್ತದೆ.

# ವಿಜಯಲಕ್ಷ್ಮಿ ದೇವಸ್ಥಾನ ಬಳಿ ಸಮುದಾಯ ಭವನ ನಿರ್ಮಿಸಲು ಮನವಿ

**ಉದಯರಶ್ಮಿ ನ್ಯೂಸ್**

ಅಫಜಲಪುರ: ತಾಲೂಕಿನ ಸುಕೇತ್ರ ಮಲ್ಲಾಬಾದ ಗ್ರಾಮದ ವಿಜಯಲಕ್ಷೀ ದೇವಸ್ಥಾನದ ಬಳಿ ಸಮುದಾಯ ಭವನ ನಿರ್ಮಿಸುವಂತೆ ದೇವಸ್ಥಾನ ಕಮೀಟಿಯವರು ಹಾಗೂ ಗ್ರಾಮಸ್ಥರು ಶಾಸಕ ಎಂ.ವೈ ಪಾಟೀಲ್ ಅವರಿಗೆ ಮನವಿ ಸಲ್ಲಿಸಿದ್ದಾರೆ.

ವಿಜಯಲಕ್ಷೀ ದೇವಸ್ಥಾನಕ್ಕೆ ನಿತ್ಯ ಬರುವ ಭಕ್ತರ ಸಂಖ್ಯೆ ಹೆಚ್ಚಾಗುತ್ತಿದೆ. ಹೀಗಾಗಿ ಭಕ್ತರ ಅನುಕೂಲಕ್ಕಾಗಿ ಸಮುದಾಯ ಭವನದ ಅವಶ್ಯಕತೆ ತುಂಬಾ ಇದೆ. ಹೀಗಾಗಿ ತಾವು ದೇವಸ್ಥಾನದ ಅಡಿಯಲ್ಲಿ ಲಭ್ಯವಿರುವ 2 ಎಕರೆ ಜಮೀನಿನಲ್ಲಿ 1 ಕೋಟಿ ವೆಚ್ಚದಲ್ಲಿ ಸಮುದಾಯ ಭವನ ನಿರ್ಮಿಸಿ ಕೊಡಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ



ಈ ಸಂದರ್ಭದಲ್ಲಿ ಅಪ್ಪಾಶಾ ಪಾಟೀಲ್, ಗುರಣ್ಣ ಪಾಟೀಲ, ಸಂತೋಷ ರಂಡಾಳೆ, ರೇವಣಸಿದ್ದ ಮ್ಯಾಕೇರಿ, ಶಿವಪುತ್ರ ಅರ್ಜುಣಗಿ, ಕಲ್ಲಪ್ಪ ನಿರೋಣಿ, ಚಂದ್ರಶಾ ಪೂಜಾರಿ, ಬಸಣ್ಣ ಜಮಾದಾರ, ಸಾಯಬಣ್ಣ ಪೂಜಾರಿ, ಶ್ರೀಕಾಂತ ನೀರೋಣಿ, ಮಹಾಂತೇಶ ಗಾಡಿ, ಸಿದ್ದು ಜಮಾದಾರ ಸೇರಿದಂತೆ ಅನೇಕರು ಇದ್ದರು.

# ಡಿಫಾರ್ಮನಲ್ಲಿ ರ‍್ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಸಾಧನೆಗೆ ಸಾಕಷ್ಟು ಅವಕಾಶಗಳಿವೆ. ಈ ತಾಲೂಕಿನಲ್ಲಿ ಸಾಕಷ್ಟು ಸಾಧಕ-ರಿದ್ದಾರೆ. ವಿದ್ಯಾರ್ಥಿಗಳು ಸಾಧಕರ ಬಗ್ಗೆ ತಿಳಿದುಕೊಂಡು ತಾವು ಸಾಧನೆ ಮಾಡುವತ್ತ ಹೆಜ್ಜೆ ಇಡಬೇಕು ಎಂದು ಸ್ಥಳೀಯ ಬಿ.ಎಲ್.ಡಿ.ಇ ಸಂಸ್ಥೆಯ ಔಷಧ ಮಹಾವಿದ್ಯಾಲಯದ ಉಪನ್ಯಾಸಕ ಮಹಾಂತೇಶ ಕವಟೇಕರ ಹೇಳಿದರು.



ಪಟ್ಟಣದ ಮಹಾವೀರ ಫಾರ್ಮಾದಲ್ಲಿ ತಾಲೂಕು ಔಷಧ ವ್ಯಾಪಾರಸ್ಥರ ಸಂಘದ ಸಹಯೋಗದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ತರಗತಿ ಕೊಠಡಿಯಲ್ಲಿ ಎಲ್ಲ ವಿದ್ಯಾರ್ಥಿಗಳನ್ನು ಗಮನದಲ್ಲಿಟ್ಟುಕೊಂಡು ಶಿಕ್ಷಕರು ಬೋಧನೆ ಮಾಡುತ್ತಾರೆ. ಆದರೆ ಕೆಲವೇ ವಿದ್ಯಾರ್ಥಿಗಳು ಸಾಧನೆ ಮಾಡುತ್ತಾರೆ. ತರಗತಿಯಲ್ಲಿ ಏಕಾಗ್ರತೆಯಿಂದ ಪಾಠ ಕೇಳುವುದರೊಂದಿಗೆ ಪಠ್ಯಪುಸ್ತಕವನ್ನು ಆಸಕ್ತಿಯಿಂದ ಆತ್ಮವಿಶ್ವಾಸದೊಂದಿಗೆ ಓದುವುದರಿಂದ ಪ್ರತಿಯೊಬ್ಬರೂ ಸಾಧನೆ ಮಾಡಬಹುದು ಎಂದು ಹೇಳಿದರು.

ತಾಲೂಕು ಔಷಧ ವ್ಯಾಪಾಸ್ಥರ ಸಂಘದ ಮಹಾವೀರ ಹೊಸಮನಿ ಮಾತನಾಡಿ, ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಂದ ಇತರರು ಪ್ರೇರಣೆ ಪಡೆಯಲಿ ಎಂಬ ಉದ್ದೇಶದಿಂದ ಸಾಧಕರನ್ನು ಗುರುತಿಸಿ ಇಂತಹ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಔಷಧ ವ್ಯಾಪಾರಸ್ಥರ ಸಂಘದ ಜಿಲ್ಲಾ ಘಟಕದ ಉಪಾಧ್ಯಕ್ಷ ರಮೇಶ ಯಳಮೇಲಿ ಕಾರ್ಯಕ್ರಮ ಉದ್ಘಾಟಿಸಿದರು.

ತಾಲೂಕು ಘಟಕದ ಅಧ್ಯಕ್ಷ ಪ್ರಭು ಪಟ್ಟಣಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಶೇಖರ ತೇಲಿ, ಲಕ್ಷ್ಮಣ ಬಿರಾದಾರ, ಎಂ.ಕೆ. ಮಠ, ಅಶೋಕ ಮುಳವಾಡ, ಎನ್.ಸಿ.ಬೇವನೂರ, ಗುರು ಸಾರಂಗಮಠ, ರುದ್ರಗೌಡ ಪಾಟೀಲ, ಶ್ರೀಕಾಂತ ಕೋರಿ ಇತರರು ಇದ್ದರು. ಆದಿನಾಥ ಉಪಾಧ್ಯೆ ಸ್ವಾಗತಿಸಿ, ನಿರೂಪಿಸಿದರು.

ಇದೇ ಸಂದರ್ಭದಲ್ಲಿ 2023-24ನೇ ಸಾಲಿನ ವಾರ್ಷಿಕ ಪರೀಕ್ಷೆಯಲ್ಲಿ ಸ್ಥಳೀಯ ಬಿ.ಎಲ್.ಡಿ.ಇ ಸಂಸ್ಥೆಯ ಔಷಧ ಮಹಾವಿದ್ಯಾಲಯದಲ್ಲಿ ರ‍್ಯಾಂಕ್ ಪಡೆದ ವಿದ್ಯಾರ್ಥಿಗಳಾದ ಮೊದಲ ರ‍್ಯಾಂಕ್ ಪಡೆದ ಅಕ್ಷತಾ ಮನಗೂಳಿ, ಏಳನೇ ರ‍್ಯಾಂಕ್ ಪಡೆದ ಪವಿತ್ರಾ ನಿಡಗುಂದಿ, ಎಂಟನೇ ರ‍್ಯಾಂಕ್ ಪಡೆದ ಲಕ್ಷ್ಮೀ ಬಿರಾದಾರ ಅವರನ್ನು ಸನ್ಮಾನಿಸಲಾಯಿತು.

# ಅರುಣಕುಮಾರ ಗೆ ನಿಗಮ ಮಂಡಳಿ ಸ್ಥಾನ ಕಲ್ಪಿಸಲು ಮನವಿ

**ಉದಯರಶ್ಮಿ ನ್ಯೂಸ್**

ಅಫಜಲಪುರ: ಹೆಚ್‌ಕೆಇ ನಿರ್ದೇಶಕರು ಹಾಗೂ ಕೆಪಿಸಿಸಿ ಸದಸ್ಯರಾಗಿರುವ ಅರುಣ-ಕುಮಾರ ಎಂ.ವೈ ಪಾಟೀಲ್ ಅವರಿಗೆ ರಾಜ್ಯದ ಯಾವುದಾದರು ನಿಗಮ ಮಂಡಳಿಗೆ ನೇಮಕ ಮಾಡುವಂತೆ ಸಂಸದ ರಾಧಾಕೃಷ್ಣ ದೊಡ್ಮನಿ ಅವರಿಗೆ ಪುರಸಭೆ ಸದಸ್ಯರು ಮನವಿ ಮಾಡಿದರು.

ಪಟ್ಟಣದ ಸರಸಂಭಾ ಕಲ್ಯಾಣ ಮಂಟಪದಲ್ಲಿ ಮತದಾರರಿಗೆ ಅಭಿನಂದನೆ ಸಲ್ಲಿಸಲು ಆಗಮಿಸಿದ್ದ ಸಂಸದರನ್ನು ಪುರಸಭೆ ಸದಸ್ಯರು ಭೇಟಿಯಾಗಿ ಸನ್ಮಾನಿಸಿ ಮನವಿ ಮಾಡಿದರು.



ಅರುಣಕುಮಾರ ಪಾಟೀಲ್ ಅವರು ತಾಲೂಕಿನಲ್ಲಿ ಪಕ್ಷವನ್ನು ಸಮರ್ಥವಾಗಿ ಸಂಘಟಿಸಿದ್ದಾರೆ. ಪಕ್ಷದ ಯಾವುದೇ ಜವಾಬ್ದಾರಿಗಳನ್ನು ಕೊಟ್ಟರೂ ಸಮರ್ಥವಾಗಿ ನಿಭಾಯಿಸುವ ಸಾಮರ್ಥ್ಯ ಹೊಂದಿದ್ದಾರೆ. ಎಲ್ಲಾ ಜಾತಿ ಜನಾಂಗದವರೊಂದಿಗೆ ಒಳ್ಳೆಯ ಒಡನಾಟ ಹೊಂದಿದ್ದಾರೆ. ಹೀಗಾಗಿ ಅವರನ್ನು ಯಾವುದಾದರೊಂದು ನಿಗಮಕ್ಕೆ ನೇಮಕ ಮಾಡಬೇಕೆಂದು ರಾಜ್ಯ ಸರ್ಕಾರಕ್ಕೆ ಸೂಚಿಸುವಂತೆ ಸಂಸದರಿಗೆ ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ಕಾಂತಪ್ಪ ಮ್ಯಾಳೇಶಿ, ಚಂದು ದೇಸಾಯಿ, ಸಾರಾಬೀ ಪೀರವಾಲೆ, ಸಹದಾ ಬೇಗಂ, ಬಾಬು ಹಳ್ಯಾಳ, ಶಿವಕುಮಾರ ಪದಕಿ, ಸುನಂದಾ ಜಮಾದಾರ, ಹಾಜಿ ಮುಜಾವರ, ಪ್ರಿಯಾಂಕಾ ಮಲಘಾಣ, ರೇಣುಕಾ ರಾಜು ಪಾಟೀಲ, ಕಮಲಾ ತಿಪ್ಪಣ್ಣ, ರವಿ ನಂದಶೆಟ್ಟಿ, ಶಂಕ್ರೆಮ್ಮ ಹರಳಯ್ಯ, ಕಾವೇರಿ ರಾಠೋಡ ಸೇರಿದಂತೆ ಅನೇಕರು ಇದ್ದರು.

# ಕೃಷಿ ಸಂಜೀವಿನಿ ವಾಹನಕ್ಕೆ ಸಂಸದ ದೊಡ್ಮನಿ ಚಾಲನೆ

**ಉದಯರಶ್ಮಿ ನ್ಯೂಸ್**

ಅಫಜಲಪುರ: ಕೃಷಿ ಇಲಾಖೆಯ ಕೃಷಿ ಸಂಜೀವಿನಿ ವಾಹನಕ್ಕೆ ಸಂಸದ ರಾದಾಕೃಷ್ಣ ದೊಡ್ಮನಿ ಅವರು ಶುಕ್ರವಾರ ಚಾಲನೆ ನೀಡಿದರು.

ಪಟ್ಟಣದಲ್ಲಿ ಮತದಾರ-ರಿಗೆ ಅಭಿನಂದನೆ ಸಲ್ಲಿಸಲು ಆಗಮಿಸಿದ್ದಾಗ ಕೃಷಿ ಇಲಾಖೆಯ ರೈತ ಸಂಜೀವಿನಿ ವಾಹನಕ್ಕೆ ಚಾಲನೆ ನೀಡಿದರು.




ಕೃಷಿ ಸಂಜೀವಿನಿ ವಾಹನವು 2024-25ನೇ ಸಾಲಿನ ಮುಂಗಾರು ಹಂಗಾಮಿನ ರೈತ ಬೆಳೆ ಸಮೀಕ್ಷೆ ಮಾಡಲಿದ್ದು ಫಸಲ ಬೀಮಾ ಯೋಜನೆ ಬೆಳೆ ವಿಮೆ ಕುರಿತು ಮಾಹಿತಯನ್ನೂ ಈ ವಾಹನದ ಮೂಲಕ ನೀಡಲಿದೆ.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಸಲಹೆಗಾರ ಬಿ.ಆರ್ ಪಾಟೀಲ್, ಶಾಸಕ ಎಂ.ವೈ ಪಾಟೀಲ್, ಪರಿಷತ್ ಸದಸ್ಯ ಜಗದೇವ ಗುತ್ತೇದಾರ, ಕೆಪಿಸಿಸಿ ಸದಸ್ಯರಾದ ಪಪ್ಪು ಪಟೇಲ, ಅರುಣಕುಮಾರ ಪಾಟೀಲ, ಮಾಜಿ ಸಚಿವ ರೇವೂನಾಯಕ ಬೆಳಮಗಿ, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಎಚ್ ಗಡಗಿಮನಿ, ತೋಟಗಾ-ರಿಕೆ ಇಲಾಖೆ ಅಧಿಕಾರಿ ಶಿವಯೋಗಿ, ಸಹಾಯಕ ಕೃಷಿ ಅಧಿಕಾರಿ ಆನಂದ ಅವರಾದ ಇದ್ದರು.

# ಕ್ರೀಡಾಕೂಟಗಳು ಸಾಮರಸ್ಯದ ಸಂಕೇತ :ದೇಶಪಾಂಡೆ



**ಉದಯರಶ್ಮಿ ನ್ಯೂಸ್**

ಕೆಂಭಾವಿ: ಯುವಕರು ಆಟೋಟಗಳಲ್ಲಿ ಆಸಕ್ತಿ ವಹಿಸಿದಾಗ ಹುರುಪು, ಹುಮ್ಮಸ್ಸು, ಉತ್ಸಾಹ, ಹೆಚ್ಚಾಗಿ ದೈಹಿಕ ಮತ್ತು ಮಾನಸಿಕ ಆರೋಗ್ಯ ವೃದ್ಧಿಯಾಗುತ್ತದೆ ಎಂದು ಪಿಎಲ್ ಡಿ ಬ್ಯಾಂಕ್ ನಿರ್ದೇಶಕ ವಾಮನರಾವ್ ದೇಶಪಾಂಡೆ ಹೇಳಿದರು.

ಪಟ್ಟಣದ ಎಸ್ ಬಿಸಿ ಕ್ಯಾಂಪ್ ನಲ್ಲಿ ಎಕ್ಸ್ ಟ್ರೀಮ್ ಬ್ಯಾಡ್ಮಿಂಟನ್ ಕ್ಲಬ್ ವತಿಯಿಂದ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಡಬಲ್ಸ್ ಬ್ಯಾಡ್ಮಿಂಟನ್ ಟೂರ್ನಮೆಂಟ್ ಪಂದ್ಯಾವಳಿ ಉದ್ಘಾಟಿಸಿ ಮಾತನಾಡಿದ ಅವರು ಆಟಗಾರರು ಸೋಲು ಗೆಲುವನ್ನು ಸಮ ಚಿತ್ತದಿಂದ ಸ್ವೀಕರಿಸಬೇಕು. ಕ್ರೀಡಾಕೂಟಗಳು ಸಾಮರಸ್ಯದ ಸಂಕೇತ ಎಂದವರು. ಕ್ಲಬ್ ಯುವಕರಿಗಾಗಿ ಕ್ರೀಡಾಕೂಟಗಳು ಆಯೋಜಿಸುತ್ತಿರುವುದು ಉತ್ತಮ ಬೆಳವಣಿಗೆ ಎಂದು ಬಣ್ಣಿಸಿದರು.

ಎಕ್ಸ್ ಟ್ರೀಮ್ ಬ್ಯಾಡ್ಮಿಂಟನ್ ಕ್ಲಬ್ ಅಧ್ಯಕ್ಷ ಮಹಿಪಾಲರಡ್ಡಿ ಡಿಗ್ಗಾವಿ, ಹಿರಿಯ ಪತ್ರಕರ್ತ ಸಂಜೀವರಾವ್ ಕುಲ್ಕರ್ಣಿ ಕ್ರೀಡಾಕೂಟಗಳನ್ನು ಆಯೋಜಿಸಲು ಕ್ಲಬ್ ವತಿಯಿಂದ ಅಗತ್ಯ ನೆರವು ನೀಡಲಾಗುವುದು. ಮುಂಬರುವ ದಿನಗಳಲ್ಲಿ ಜನಪ್ರತಿನಿಧಿಗಳು ಹಾಗೂ ಸ್ಥಳೀಯರ ಸಹಕಾರದಿಂದ ಸುಸಜ್ಜಿತ ಕ್ರೀಡಾಂಗಣ ನಿರ್ಮಾಣ ಮಾಡಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

ಇದೇ ವೇಳೆ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆದು ಯಾದಗಿರಿ, ದ್ವಿತೀಯ ಸ್ಥಾನ ಪಡೆದ ಶಹಾಪುರ, ತೃತೀಯ ಸ್ಥಾನ ಪಡೆದ ಹುಣಸಗಿ, ತಂಡಗಳಿಗೆ ನಗದು ಬಹುಮಾನ ನೀಡಿ ಗೌರವಿಸಲಾಯಿತು.

ಪ್ರಮುಖರಾದ ಮಡಿವಾಳಪ್ಪಗೌಡ ಪೋಲೀಸ್ ಪಾಟೀಲ, ಸಾಹೇಬಲಾಲ ಆಂದೇಲಿ, ರವಿ ಸೋನ್ನದ, ಮಹಿಬೂಬಸಾಬ ನಾಶಿ, ರಫೀಕ್ ವಡಕೇರಿ, ಬಂದೇನವಾಜ್ ನಾಲತವಾಡ, ಡಿ ಸಿ ಪಾಟೀಲ, ಸೂಗೂರಯ್ಯ ಇಂಡಿ, ಬಸನಗೌಡ ಪಾಟೀಲ, ನಹೀಮ್ ಸಾಬ ಖಾಜಿ, ಮಾಸುಮಸಾಬ ನಾಶಿ, ಸಲೀಂ ಪೇಶಮಾಮ್, ಪರಶುರಾಮ ನಾರಾಯಣಕರ, ನಂದಪ್ಪ ಕವಲ್ದಾರ, ತಿರುಪತಿ ವಡ್ಡರ, ಮಾರುತಿ ಆರ್ ಭೋವಿ, ಸೇರಿದಂತೆ ಬ್ಯಾಡ್ಮಿಂಟನ್ ಆಟಗಾರರು, ಕ್ರೀಡಾ ಅಭಿಮಾನಿಗಳು, ಇನ್ನಿತರರು ಉಪಸ್ಥಿತರಿದ್ದರು.

### ಸರಕಾರದ ಗಮನ ಸೆಳೆಯಲು ಶಾಸಕ ಯಶವಂತರಾಯಗೌಡ ಪಾಟೀಲರಿಗೆ ಮನವಿ

# ರಾಜ್ಯ ಸರಕಾರಿ ನೌಕರರ 7ನೇ ವೇತನ & ಒಪಿಎಸ್ ಜಾರಿಗೆ ಆಗ್ರಹ



**ಉದಯರಶ್ಮಿ ನ್ಯೂಸ್**

ಇಂಡಿ: 7ನೇ ವೇತನ ಆಯೋಗದ ವರದಿಯನ್ನು ಯಥಾವತ್ತಾಗಿ ಹಾಗೂ ಒಪಿಎಸ್ ಜಾರಿಗೆ ಗೊಳಿಸುವುದು ಸೇರಿದಂತೆ ಕೆಲವು ಪ್ರಮುಖ ಬೇಡಿಕೆ ಈಡೇರಿಕೆಯ ಬಗ್ಗೆ ಸರಕಾರದ ಗಮನ ಸೆಳೆಯಲು ಶಾಸಕ ಯಶವಂತರಾಯಗೌಡ ಪಾಟೀಲ ಅವರಿಗೆ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಘಟಕದ ಸಹಯೋಗದಲ್ಲಿ ಮನವಿ ಸಲ್ಲಿಸಿದರು.

> "ರಾಜ್ಯದ ಅಭಿವೃದ್ಧಿ ಸೂಚ್ಯಾಂಕದ ಬೆಳವಣಿಗೆಯಲ್ಲಿ, ಜಿ ಎಸ್ಟಿ ತೆರಿಗೆ ಸಂಗ್ರಹಣೆಯಲ್ಲಿ ಇಡೀ ದೇಶಕ್ಕೆ ಮಾದರಿಯಾಗಲು ರಾಜ್ಯ ಸರ್ಕಾರಿ ನೌಕರ ಪಾತ್ರ ಬಹಳ ಮುಖ್ಯ ವಾಗಿದೆ. ಕಾರ್ಯಾಂಗದ ನೌಕರರ ಬೇಡಿಕೆ ಪೂರೈಸುವ ಜವಾಬ್ದಾರಿ ಸರಕಾರದಾಗಿದೆ. ಈಗಾಗಲೇ ಸರಕಾರ ಭರವಸೆ ನೀಡಿದೆ ಅದರಂತೆ ನೌಕರಸ್ಥರ ಬೇಡಿಕೆ ಪೂರೈಸಬೇಕು."
>
> – ಎಸ್ ಆರ್ ಪಾಟೀಲ, ವಿಭಾಗೀಯ ಸಂಘಟನಾ ಕಾರ್ಯದರ್ಶಿ

ಶನಿವಾರ ಪಟ್ಟಣದ ಪ್ರವಾಸಿ ಮಂದಿರಕ್ಕೆ ತೆರಳಿದ ನೌಕರಸ್ಥ ಸದಸ್ಯರು, ರಾಜ್ಯದ 6 ಲಕ್ಷ ಸರ್ಕಾರಿ ನೌಕರರನ್ನು ಪ್ರತಿನಿಧಿಸುವ ಸಂಘದ ಬೇಡಿಕೆ ಈಡೇರಿಕೆಗೆ, ವರದಿ ಜಾರಿಗೆ ಬಗ್ಗೆ ಮನವಿ ಮಾಡಿದರು.

ಈ ಸಂಘಟನೆ ರಾಜ್ಯದ 31 ಕಂದಾಯ ಜಿಲ್ಲೆ, 3 ಶೈಕ್ಷಣಿಕ ಜಿಲ್ಲೆ, 183 ತಾಲೂಕುಗಳಲ್ಲಿ ಸಂಘವು ಶಾಖೆಗಳನ್ನು ಹೊಂದಿದೆ. 6 ಲಕ್ಷ ನೌಕರರನ್ನು ಪ್ರತಿನಿಧಿಸುವ ರಾಜ್ಯದ ಏಕೈಕ ಬೃಹತ್ ಸಂಘಟನೆ ಇದಾಗಿದೆ. ರಾಷ್ಟ್ರ, ರಾಜ್ಯದಲ್ಲಿ ಘಟಿಸುವ ಪ್ರಕೃತಿ ವಿಕೋಪ, ಉತ್ತರ ಕರ್ನಾಟಕದ ಪ್ರವಾಹ, ಕೋವಿಡ್ ಸಂಕಷ್ಟದಲ್ಲಿ ಸರ್ಕಾರಕ್ಕೆ ಆರ್ಥಿಕ ಸಹಕಾರ ನೀಡಿ ಸೇವಾ ಕಾರ್ಯ ನಿರ್ವಹಿಸುವ ಮೂಲಕ ದೇಶದಲ್ಲಿಯೇ ಮಾದರಿ ಸಂಘಟನೆಯಾಗಿದೆ. ರಾಜ್ಯದಲ್ಲಿ 2.60 ಲಕ್ಷ ಸರ್ಕಾರಿ ಹುದ್ದೆ ಖಾಲಿ ಇದ್ದರೂ ಹೆಚ್ಚುವರಿ ಒತ್ತಡದೊಂದಿಗೆ ಈಗಿರುವ ನೌಕರರು ಕೆಲಸ ನಿರ್ವಹಿಸುತ್ತಿದ್ದಾರೆ. ರಾಜ್ಯದ ಎಲ್ಲ ಯೋಜನೆ ಶ್ರೀಸಾಮಾನ್ಯನಿಗೆ ತಲುಪಿಸಿ, ರಾಜ್ಯದ ಅಭಿವೃದ್ಧಿ ಸೂಚ್ಯಾಂಕದ ಬೆಳವಣಿಗೆಯಲ್ಲಿ, ಜಿ ಎಸ್ಟಿ ತೆರಿಗೆ ಸಂಗ್ರಹಣೆಯಲ್ಲಿ ಇಡೀ ದೇಶಕ್ಕೆ ಮಾದರಿಯಾಗಲು ಸರ್ಕಾರಿ ನೌಕರ ಪಾತ್ರ ಬಹಳ ಮುಖ್ಯ ವಾಗಿದೆ. ಕಾರ್ಯಾಂಗದ ನೌಕರರ ಬೇಡಿಕೆ ಪೂರೈಸುವ ಜವಾಬ್ದಾರಿ ಸರಕಾರದಾಗಿದೆ.

ಬೇಡಿಕೆ ಈಡೇರಿಕೆ ವಿಳಂಬ : 7ನೇ ವೇತನ ಆಯೋಗದ ವರದಿಯ ಜಾರಿ ತನ್ನಿ ಸೇರಿದಂತೆ ಪ್ರಮುಖ ಅಂಶಗಳನ್ನು ಮನವಿಯಲ್ಲಿ ಪ್ರಸ್ತಾಪಿಸಿದ್ದು, ಇದರ ಜೊತೆಗೆ ಎನ್‌ಪಿಎಸ್ ರದ್ದುಪಡಿಸಿ ಹಳೇ ಪಿಂಚಣಿ ಯೋಜನೆ ಮರು ಜಾರಿಗೊಳಿಸಬೇಕು. ಕರ್ನಾಟಕ ರಾಜ್ಯ ಆರೋಗ್ಯ ಸಂಜೀವಿನಿ ಯೋಜನೆ (ಕೆಎಎಸ್ಎಸ್) ಅನುಷ್ಠಾನಗೊಳಿಸಬೇಕು ಎನ್ನುವ ನ್ಯಾಯಯುತ ಬೇಡಿಕೆಗಳ ಈಡೇರಿಕೆಯ ಅವಶ್ಯಕತೆಯನ್ನು ವಿವರಿಸಿ ಈಗಾಗಲೇ ಬೇಡಿಕೆ ಈಡೇರಿಕೆ ಬಹಳಷ್ಟು ವಿಳಂಬಗೊಂಡಿದ್ದು, ಇನ್ನಷ್ಟು ವಿಳಂಬಕ್ಕೆ ಆಸ್ಪದ ನೀಡದೆ ಕೂಡಲೇ ಈಡೇರಿಸುವಂತೆ ನೌಕರರು ಮತ್ತು ಅವರ ಕುಟುಂಬದವರ ಪರವಾಗಿ ವಿನಂತಿಸಲಾಗುತ್ತದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಈ ಸಂದರ್ಭದಲ್ಲಿ ಅಧ್ಯಕ್ಷ ಎಸ್ ಡಿ.ಪಾಟೀಲ, ವಿಭಾಗೀಯ ಸಂಘಟನಾ ಕಾರ್ಯದರ್ಶಿ ಎಸ್ .ಆರ್. ಪಾಟೀಲ, ಗೌರವಾಧ್ಯಕ್ಷ ಎಸ್ ಎನ್ ಕೋಳಿ, ಉಪಾಧ್ಯಕ್ಷ ಆರ್.ಕೆ ದುದಗಿ, ಜಿ.ಜಿ.ಬರಡೋಲ, ಪದಾಧಿಕಾರಿ ಎಲ್.ಎ.ಅಲೇಗಾಂವ, ಎಸ್.ಎಸ್.ಅತನೂರ, ಫಯಾಜ್ ಚೌಧರಿ, ಭಾಷಾ ಕುಮಸಗಿ, ಬಿ.ಎಮ್.ಅಂಜುಟಗಿ, ಜಿ.ಪಿ.ಟಿ.ಅಧ್ಯಕ್ಷ ಶಂಕರ ಕೋಳೆಕರ, ಸಿ.ಎಸ್.ಹಕಾರಿ, ಸಂಜೀವ ಅಂಕಲಗಿ, ರಮೇಶ ಮಂಜಣ್ಣಿ, ಬಸವರಾಜ ಗೊರನಾಳ, ಶ್ರಿಮಂತ ನೇದಲಗಿ, ಬಸವರಾಜ ಗಿಡಗಂಟಿ, ಎಫ್.ಎಮ್.ದರ್ಗಾ, ಪಿ.ಡಿ.ಓ.ಅಧ್ಯಕ್ಷ ಪಾರೆ, ರಜಪೂತ , ಆರ್.ವ್ಹಿ ಪಾಟೀಲ, ಎಸ್ ಎಸ್ ರೂಗಿ, ಸೇರಿ ಸರ್ಕಾರದ ಎಲ್ಲ ಇಲಾಖೆಗಳ ನೌಕರರು ನೂರಾರು ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

> "6 ಲಕ್ಷ ನೌಕರರನ್ನು ಪ್ರತಿನಿಧಿಸುವ ರಾಜ್ಯದ ಏಕೈಕ ಬೃಹತ್ ಸಂಘಟನೆ ಇದಾಗಿದೆ. ರಾಷ್ಟ್ರ, ರಾಜ್ಯದಲ್ಲಿ ಘಟಿಸುವ ಪ್ರಕೃತಿ ವಿಕೋಪ, ಉತ್ತರ ಕರ್ನಾಟಕದ ಪ್ರವಾಹ, ಕೋವಿಡ್ ಸಂಕಷ್ಟದಲ್ಲಿ ಸರ್ಕಾರಕ್ಕೆ ಆರ್ಥಿಕ ಸಹಕಾರ ನೀಡಿ ಸೇವಾ ಕಾರ್ಯ ನಿರ್ವಹಿಸುವ ಮೂಲಕ ದೇಶದಲ್ಲಿಯೇ ಮಾದರಿ ಸಂಘಟನೆಯಾಗಿದೆ. ಈ ಸದ್ಯ ರಾಜ್ಯ ಸರಕಾರಿ ನೌಕರಸ್ಥರಿಗೆ ಸುಳ್ಳು ಭರವಸೆ ನೀಡುತ್ತಾ, ಕಾಲಹರಣ ಮಾಡುವುದು ಮತ್ತು ನೌಕರಸ್ಥರ ಸಹನೆ, ತಾಳ್ಮೆ ಪರೀಕ್ಷೆ ಮಾಡುವಂತಾಗಿದ್ದೆ. ಇದಕ್ಕೆಲ್ಲ ಇತಿಶ್ರೀ ಹೇಳಲು ಸರಕಾರ ನೌಕರಸ್ಥರ ಬೇಡಿಕೆ ಪೂರೈಸಲು ಮನವಿ ಮಾಡಿಕೊಳ್ಳತ್ತೆವೆ."
>
> – ಎಸ್ ಡಿ ಪಾಟೀಲ,
>
> ಅಧ್ಯಕ್ಷರು, ರಾಜ್ಯ ಸರ್ಕಾರಿ ನೌಕರ ತಾಲ್ಲೂಕು ಘಟಕ, ಇಂಡಿ

### ಸಿಂದಗಿಯಲ್ಲಿ ಕೂಡಲಸಂಗಮ ಪೀಠದ ಜಗದ್ಗುರು ಬಸವ ಜಯ ಮೃತ್ಯುಂಜಯ ಸ್ವಾಮೀಜಿ ವಿಷಾದ

# ಪಂಚಮಸಾಲಿಗರ ಸುದೀರ್ಘ ಹೋರಾಟಕ್ಕೆ ನ್ಯಾಯ ದೊರಕದಿರುವುದು ವಿಪರ್ಯಾಸ



**ಉದಯರಶ್ಮಿ ನ್ಯೂಸ್**

ಸಿಂದಗಿ: 2ಎ ಮೀಸಲಾತಿಗಾಗಿ ಪಂಚಮಸಾಲಿ ಸಮಾಜ ನಡೆಸಿರುವ ಹೋರಾಟಕ್ಕೆ ದೀರ್ಘ ಇತಿಹಾಸವಿದೆ. ಇಷ್ಟೊಂದು ಸುಧೀರ್ಘ ಹೋರಾಟದ ನಂತರವೂ ನ್ಯಾಯ ದೊರಕದೆ ಇದ್ದದ್ದು ವಿಪರ್ಯಾಸ ಎಂದು ಕೂಡಲಸಂಗಮ ಪೀಠದ ಜಗದ್ಗುರು ಬಸವ ಜಯ ಮೃತ್ಯುಂಜಯ ಸ್ವಾಮೀಜಿ ವಿಷಾದ ವ್ಯಕ್ತಪಡಿಸಿದರು.

ಶಾಸಕ ಅಶೋಕ ಮನಗೂಳಿ ಅವರ ಮನೆಗೆ ಕೂಡಲಸಂಗಮ ಪೀಠದ ಜಗದ್ಗುರು ಬಸವಜಯ ಮೃತ್ಯುಂಜಯ ಸ್ವಾಮೀಜಿ ಹಾಗೂ ಸಮಾಜ ಬಂಧುಗಳು ತೆರಳಿ ಮುಂಗಾರು ಅಧಿವೇಶನದಲ್ಲಿ 2ಎ ಮೀಸಲಾತಿಗಾಗಿ ಅಧಿವೇಶನದಲ್ಲಿ ಪ್ರಸ್ತಾಪಿಸಬೇಕೆಂದು ಆಗ್ರಹ ಪತ್ರವನ್ನು ಸಲ್ಲಿಸಿ ಮಾತನಾಡಿದ ಅವರು, ಕಳೆದ ಬಾರಿಯ ಆಡಳಿತಾರೂಢ ಬಿಜೆಪಿ ಸರಕಾರದ ಬಿ.ಎಸ್.ಯಡಿಯೂರಪ್ಪ ಹಾಗೂ ಬಸವರಾಜ ಬೊಮ್ಮಾಯಿ ಸರ್ಕಾರದಿಂದ ಸೂಕ್ತ ಸ್ಪಂದನೆ ಸಿಗಲಿಲ್ಲ. ಪ್ರಸ್ತುತ ಸರ್ಕಾರವೂ ನಿರ್ಲಕ್ಷ ಧೋರಣೆ ತಾಳುತ್ತಿದೆ. ಪಂಚಮಸಾಲಿಗಳ ಹೋರಾಟಕ್ಕೆ ಯಶಸ್ಸು ಸಿಗದೇ ಇರಲು ಕಾಣದ ಕೈಗಳು ಕೆಲಸ ಮಾಡುತ್ತಿವೆ. ಇದ್ಯಾವುದಕ್ಕೂ ಜಗ್ಗದೆ, ಎದೆಗುಂದದೆ ಯಾರೇ ಮುಖ್ಯಮಂತ್ರಿಯಾಗಿರಲಿ ಯಾವುದೇ ಸರ್ಕಾರ ಬರಲಿ ಜಯ ಸಿಗುವವರೆಗೂ ನಮ್ಮ ಹೋರಾಟ ನಿರಂತರವಾಗಿರುತ್ತದೆ. ಸಮಾಜದ ಕೃಪಾಕಟಾಕ್ಷದಿಂದ ಚುನಾಯಿತ ಶಾಸಕರಲ್ಲಿ ಬೆರಳೆಣಿಕೆಯಷ್ಟು ಶಾಸಕರಿಂದ ಮಾತ್ರ ಸಹಕಾರ ದೊರೆತಿದೆ. ಅವರುಗಳಲ್ಲಿ ಸಿಂದಗಿ ಶಾಸಕ ಅಶೋಕ ಮನಗೂಳಿ ಅವರು ಕೂಡ ಒಬ್ಬರು. ಮೀಸಲಾತಿ ಹೋರಾಟದ ಪ್ರಥಮ ಸಭೆ ಸಿಂದಗಿಯಲ್ಲಿ ನಡೆದಾಗ ಮಾಜಿ ಸಚಿವ ದಿ.ಎಂ.ಸಿ ಮನಗೂಳಿ ಅವರು ಸಹಕಾರ ನೀಡಿ ಹೋರಾಟಕ್ಕೆ ಬಲ ತುಂಬಿದ್ದರು. ಅವರ ಸುಪುತ್ರ ಶಾಸಕ ಅಶೋಕ ಮನಗೂಳಿ ಅವರು ಪಕ್ಷಾತೀತವಾಗಿ ಗಟ್ಟಿತನದಿಂದ ಸದನದಲ್ಲಿ 2ಎ ಮೀಸಲಾತಿಯ ಹಕ್ಕು ಪ್ರತಿಪಾದಿಸಬೇಕು. ನಮ್ಮ ಸಮಾಜದಲ್ಲಿ ನಾನೊಬ್ಬನೇ ಬದುಕಬೇಕೆನ್ನುವ ಶಾಸಕರು ಯಾರು ಇಲ್ಲ. ಕೃಷಿ ಕ್ಷೇತ್ರ ಸೊರಗಿರುವ ಕಾರಣ ಶಿಕ್ಷಣದಿಂದಾದರೂ ನಮ್ಮ ಮಕ್ಕಳು ಸಮಾಜದ ಮುಖ್ಯ ವಾಹಿನಿಗೆ ಬರಲಿ ಎನ್ನುವ ಸದುದ್ದೇಶ ಒಂದೇ ಈ ಹೋರಾಟಕ್ಕೆ ಮೂಲ ಕಾರಣವಾಗಿದೆ. ಲಿಂಗಾಯತ ಸಮಾಜದ ಇತರೆ ಪಂಗಡದ ನಾಯಕರು ತಮ್ಮ ತಮ್ಮ ಪಂಗಡಗಳಿಗೆ ಮೀಸಲಾತಿ ದೊರಕಿಸಿಕೊಟ್ಟು ಸಮಾಜದ ಋಣ ತೀರಿಸುವಲ್ಲಿ ಯಶಸ್ವಿಯಾದರೂ ಸಮಗ್ರ ಲಿಂಗಾಯತರಿಗೆ ಮೀಸಲಾತಿ ಅನ್ವಯವಾಗದೆ ಮೋಸವಾಗಿದೆ. ಅನ್ನ ನೀಡುವ ಸಮಾಜಕ್ಕೆ ಮೀಸಲಾತಿ ಸಿಗದೇ ಕುಳಿತು ತಿನ್ನುವ ಸಮಾಜಗಳಿಗೆ ಮೀಸಲಾತಿ ಸಿಕ್ಕಂತಾಗಿದೆ. ಕಾರಣ ಸಮಾಜದ ಋಣ ತೀರಿಸಲು ಎಲ್ಲ ಲಿಂಗಾಯತ ಒಳ ಪಂಗಡಗಳ ಮೀಸಲಾತಿಗಾಗಿ ಹಾಗೂ ಕ್ಷೇತ್ರದ ವಂಚಿತ ಸಮುದಾಯಗಳ ಪರವಾಗಿ ಶಾಸಕರು ತಮ್ಮ ಹಕ್ಕನ್ನು ಪ್ರತಿಪಾದಿಸಬೇಕೆಂದು ಆಗ್ರಹಿಸಿದರು.

ಒಂದು ವೇಳೆ ನಿಮ್ಮೆಲ್ಲರ ಒತ್ತಡಕ್ಕೂ ಸರ್ಕಾರ ಸ್ಪಂದಿಸದಿದ್ದರೆ ಸಮಾಜದ ಹೋರಾಟಕ್ಕೆ ಶ್ರೀಗಳೊಂದಿಗೆ ನಿರಂತರ ಹೋರಾಟಕ್ಕೆ ಕೈಜೋಡಿಸಬೇಕೆಂದು ಮನವಿ ಮಾಡಿದರು.

ಈ ವೇಳೆ ಆಗ್ರಹ ಪತ್ರ ಸ್ವೀಕರಿಸಿದ ಶಾಸಕ ಅಶೋಕ ಮನಗೂಳಿ ಮಾತನಾಡಿ, ನಾನು ಸಿಂದಗಿ ಕ್ಷೇತ್ರದ ಜನಪ್ರತಿನಿಧಿಯಾಗುವಲ್ಲಿ ಪಂಚಮಸಾಲಿ ಸಮುದಾಯದ ಪಾತ್ರ ಬಹುದೊಡ್ಡದು. ಅದಕ್ಕಾಗಿ ಮುಂಬರುವ ಅಧಿವೇಶನದಲ್ಲಿ ನ್ಯಾಯ ದೊರಕಿಸಿ ಕೊಡುವ ನಿಟ್ಟಿನಲ್ಲಿ ಗಟ್ಟಿಯಾಗಿ ಧ್ವನಿ ಎತ್ತುತ್ತೇನೆ. ಹಗಲಿರುಳೆನ್ನದೆ ರಾಜ್ಯಾದ್ಯಂತ ಕಾಲಿಗೆ ಚಕ್ರ ಕಟ್ಟಿಕೊಂಡವರಂತೆ ಪಂಚಮಸಾಲಿಗಳ ಏಳಿಗೆಗೆ ಶ್ರಮಿಸುತ್ತಿರುವ ಬಸವಜಯ ಮೃತ್ಯುಂಜಯ ಸ್ವಾಮೀಜಿಗಳ ಹೋರಾಟಕ್ಕೆ ಸದಾ ಬೆಂಬಲ ನೀಡುತ್ತೇನೆ ಎಂದರು.

ಇದೇ ಸಂದರ್ಭದಲ್ಲಿ ಪಂಚಮಸಾಲಿ ಸಮಾಜದ ಜಿಲ್ಲಾಧ್ಯಕ್ಷ ಬಿ.ಎಂ.ಪಾಟೀಲ, ತಾಲೂಕಾಧ್ಯಕ್ಷ ಎಂ.ಎಂ.ಹಂಗರಗಿ, ಭಾಜಪ ಮುಖಂಡ ಅಶೋಕ ಅಲ್ಲಾಪುರ, ನೌಕರ ಸಂಘದ ತಾಲೂಕಾಧ್ಯಕ್ಷ ಅಶೋಕ ತೆಲ್ಲೂರ, ಮಾತನಾಡಿದರು.

ಕಾರ್ಯದರ್ಶಿ ಆನಂದ ಶಾಬಾದಿ ಸ್ವಾಗತಿಸಿ, ನಿರೂಪಿಸಿ, ವಂದಿಸಿದರು. ಮುಖಂಡರಾದ ಶಿವಪ್ಪಗೌಡ ಬಿರಾದಾರ, ಸೋಮನಗೌಡ ಬಿರಾದರ, ಡಾ.ಅರವಿಂದ ಮನಗೂಳಿ, ರಮೇಶ ದೇಸಾಯಿ, ಡಾ.ಚನ್ನವೀರ(ಮುತ್ತು) ಮನಗೂಳಿ, ಚಂದ್ರಶೇಖರ ನಾಗರಬೆಟ್ಟ, ಶರಣಬಸವ ಕಲಶೆಟ್ಟಿ, ಶ್ರೀಶೈಲ ಬುಕ್ಕಾಣಿ, ವಕೀಲರಾದ ಎಸ್.ಬಿ.ಪಾಟೀಲ, ಶ್ರೀಶೈಲ ಮಳಜಿ, ಮಲ್ಲನಗೌಡ ಪಾಟೀಲ ಇಬ್ರಾಹಿಂಪುರ, ಗುರಣ್ಣಗೌಡ ಹುಮ್ನಾಬಾದ್, ರವಿ ದೇಸಾಯಿ ಸಂಗನಗೌಡ ಪಾಟೀಲ, ಶ್ರೀಶೈಲ ಯಳಮೇಲಿ, ಶಿವರಾಜ್ ಪಾಟೀಲ, ಗುರು ಆಕಳವಾಡಿ, ಪ್ರತಿಭಾ ಚಳ್ಳಗಿ, ಶಂಕರ ಬೋರಗಿ, ಬಸವರಾಜ ಗುಗ್ಗರಿ ಸೇರಿದಂತೆ ಸಮಾಜದ ಗುರು ಹಿರಿಯರು, ಮುಖಂಡರು ಉಪಸ್ಥಿತರಿದ್ದರು.

# ಸಂಸದ ರಾಧಾಕೃಷ್ಣ ದೊಡ್ಮನಿ ಮಳೇಂದ್ರ ಮಠಕ್ಕೆ ಭೇಟಿ



**ಉದಯರಶ್ಮಿ ನ್ಯೂಸ್**

ಅಫಜಲಪುರ: ಕಲಬುರಗಿ ಸಂಸದರಾಗಿ ಆಯ್ಕೆಯಾದ ಬಳಿಕ ಮೊದಲ ಬಾರಿಗೆ ಅಫಜಲಪುರ ಪಟ್ಟಣಕ್ಕೆ ಆಗಮಿಸಿದ್ದ ಸಂಸದ ರಾಧಾಕೃಷ್ಣ ದೊಡ್ಮನಿ ಅವರು ಇಲ್ಲಿನ ಐತಿಹಾಸಿಕ ಮಳೇಂದ್ರ ಸಂಸ್ಥಾನ ಮಠಕ್ಕೆ ಭೇಟಿ ನೀಡಿ ವಿಶ್ವಾರಾಧ್ಯ ಮಳೇಂದ್ರ ಶಿವಾಚಾರ್ಯರ ಆಶೀರ್ವಾದ ಪಡೆದುಕೊಂಡರು.

ಈ ಸಂದರ್ಭದಲ್ಲಿ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ, ಮುಖ್ಯಮಂತ್ರಿಗಳ ಸಲಹೆಗಾರ ಬಿ.ಆರ್ ಪಾಟೀಲ, ಪರಿಷತ್ ಸದಸ್ಯ ಜಗದೇವ ಗುತ್ತೇದಾರ, ಮಾಜಿ ಸಚಿವ ಸಿದ್ದರಾಮ ಮೇತ್ರೆ, ಪರಿಷತ ಸದಸ್ಯ ತಿಪ್ಪಣ್ಣಪ್ಪ ಕಮಕನೂರ, ಕೆಪಿಸಿಸಿ ಸದಸ್ಯರಾದ ಪಪ್ಪು ಪಟೇಲ, ಅರುಣಕುಮಾರ ಎಂ.ವೈ ಪಾಟೀಲ, ಚಂದು ಕರ್ಜಗಿ, ಮತೀನ ಪಟೇಲ ಸೇರಿದಂತೆ ಅನೇಕರು ಇದ್ದರು.

# ಲೋಕಅದಾಲತ್ ದಿಂದ ಪಕ್ಷಗಾರರಲ್ಲಿ ಸಾಮರಸ್ಯ ಸಾಧ್ಯ :ನ್ಯಾ.ಸುಲ್ತಾನ



**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ನ್ಯಾಯಾಲಯಗಳಲ್ಲಿ ನಡೆಯುವ ರಾಷ್ಟ್ರೀಯ ಲೋಕಅದಾಲತ್ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಪ್ರಕರಣಗಳನ್ನು ಮುಗಿಸಿಕೊಂಡರೆ ಕಕ್ಷಿಗಾರರಲ್ಲಿ ಸಾಮರಸ್ಯ ಭಾವನೆ ಉಂಟಾಗಿ ಮುಂದಿನ ದಿನಗಳಲ್ಲಿ ಉತ್ತಮ ಬಾಂಧವ್ಯ ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಹಿರಿಯ ಸಿವ್ಹಿಲ್ ನ್ಯಾಯಾಧೀಶೆ ತಯ್ಯಾಬ ಸುಲ್ತಾನ ಹೇಳಿದರು.

ಪಟ್ಟಣದ ನ್ಯಾಯಾಲಯದಲ್ಲಿ ಶನಿವಾರ ಜರುಗಿದ ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಲೋಕ ಅದಾಲತ್ ಕಾರ್ಯಕ್ರಮಗಳು ಯಶಸ್ವಿಯಾಗಬೇಕಾದರೆ ವಕೀಲರ ಮತ್ತು ಕಕ್ಷಿದಾರರ ಸಹಕಾರ ಬಹಳಷ್ಟು ಮುಖ್ಯವಾಗಿದೆ. ಲೋಕಅದಾಲತ್ ಮಹತ್ವದ ಕುರಿತು ಕಕ್ಷಿದಾರರಿಗೆ ಅರಿವು ಮೂಡಿಸುವದು ತುಂಬಾ ಅಗತ್ಯವಾಗಿದೆ ಎಂದರು.

ಇಂದು ಜರುಗಿದ ರಾಷ್ಟ್ರೀಯ ಲೋಕಅದಾಲತ್ದಲ್ಲಿ ಮೂವರು ನ್ಯಾಯಾಧೀಶರು ವಿವಿಧ ಒಟ್ಟು 2,518 ಪ್ರಕರಣಗಳನ್ನು ಕೈಗೆತ್ತಿಕೊಂಡು ಇದರಲ್ಲಿ 1,495 ಪ್ರಕರಣಗಳನ್ನು ಇತ್ಯರ್ಥಪಡಿಸಿ ರೂ. 10,699,269 ಹಣವನ್ನು ಸೆಂಟಲ್ಮೆಂಟ್ ಮಾಡಿದರು.

ಹಿರಿಯ ಸಿವ್ಹಿಲ್ ನ್ಯಾಯಾಧೀಶೆ ತಯ್ಯಾಬ ಸುಲ್ತಾನ ಅವರು ಒಟ್ಟು 693 ಪ್ರಕರಣಗಳನ್ನು ಕೈಗೆತ್ತಿಕೊಂಡು 440 ಪ್ರಕರಣಗಳನ್ನು ಇತ್ಯರ್ಥಪಡಿಸಿ 34,98000 ರೂ. ಸೆಂಟಲ್ಮೆಂಟ್ ಮಾಡಿದರೆ, 693 ಪ್ರಕರಣಗಳನ್ನು ಕೈಗೆತ್ತಿಕೊಂಡು 410 ಪ್ರಕರಣಗಳನ್ನು ಇತ್ಯರ್ಥಪಡಿಸಿ 51,47,800 ರೂ. ಸೆಂಟಲ್ಮೆಂಟಲ್ ಮಾಡಿದರು.

ಸಿವ್ಹಿಲ್ ನ್ಯಾಯಾಧೀಶೆ ತೇಜಶ್ವಿನಿ ಸೊಗಲದ ಅವರು ಒಟ್ಟು 636 ಪ್ರಕರಣಗಳನ್ನು ಕೈಗೆತ್ತಿಕೊಂಡು 235 ಪ್ರಕರಣಗಳನ್ನು ಇತ್ಯರ್ಥಪಡಿಸಿ ರೂ. 20,34,219 ಸೆಂಟಲ್ಮೆಂಟ್ ಮಾಡಿದರು. ಹೆಚ್ಚುವರಿ ಸಿವ್ಹಿಲ್ ನ್ಯಾಯಾಧೀಶೆ ಸೌಮ್ಯ ಹೂಲಿ ಅವರು 496 ಪ್ರಕರಣಗಳನ್ನು ಕೈಗೆತ್ತಿಕೊಂಡು ಅದರಲ್ಲಿ 410 ಪ್ರಕರಣಗಳನ್ನು ಇತ್ಯರ್ಥಪಡಿಸಿ ರೂ. 19,250 ಸೆಂಟಲ್ಮೆಂಟಲ್ ಮಾಡಿದರು.

ರಾಷ್ಟ್ರೀಯ ಲೋಕಅದಾಲತ್ದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕ ಡಿ.ಎಸ್.ಬಳ್ಳೊಳ್ಳಿ, ರಾಜರಾಜೇಶ್ವರಿ ಸುತಾರ, ವಕೀಲರ ಸಂಘದ ಅಧ್ಯಕ್ಷ ಎಚ್.ಎಸ್.ಗುರಡ್ಡಿ, ಕಾರ್ಯದರ್ಶಿ ರವಿ ರಾಠೋಡ,ಅಪರ ಸರ್ಕಾರಿ ವಕೀಲ ಎಸ್.ಎಸ್.ಬಶೆಟ್ಟಿ, ವ್ಹಿ.ಬಿ.ಮರ್ತೂರ, ಬಿ.ಕೆ. ಕಲ್ಲೂರ, ಬಿ.ಆರ್.ಅಡ್ಡೊಡಗಿ, ಎಸ್.ಎಸ್.ಪಾಟೀಲ, ಎಂ. ಎಸ್.ಬಿದರಕುಂದಿ, ಎಸ್. ಎಲ್.ಲಮಾಣಿ, ಎಸ್.ಎಸ್. ಕೋಳೂರು, ಸುರೇಶ ಚಿಂಚೋಳ್ಳಿ, ಐ.ಎ.ಪರಮಗೊಂಡ, ರಾಜು ಅಡ್ಡೊಡಗಿ, ಆರ್.ಬಿ.ಗಣಕುಮಾರ, ಎಸ್.ಎ.ಯರನಾಳ, ಎಂ.ಎಸ್. ಗೊಳಸಂಗಿ, ಜಿ.ಜಿ.ಬಿಸನಾಳ, ಜಿ.ಬಿ.ಬಾಗೇವಾಡಿ, ವೈ. ಎಂ.ಆನಂದಶೆಟ್ಟಿ, ಬಿ.ಪಿ.ಪತ್ತಾರ, ಎಂ.ಎ.ಯರನಾಳ, ಶಿಲ್ಪಾ ಮುಚಖಂಡಿ, ಜಿ.ಆರ್.ಬೀಳಗಿ, ವ್ಹಿ.ಜಿ.ಕುಲಕರ್ಣಿ, ಎಸ್. ಎಂ.ಗಬ್ಬೂರ, ಎ.ಸಿ.ಚಿಕ್ಕೊಂಡ, ಡಿ.ಎಸ್.ಪವಾರ, ಆರ್. ಎಸ್.ಪವಾರ, ಎಸ್.ಪಿ.ಲಮಾಣಿ, ಎನ್.ಎಸ್.ಬಿರಾದಾರ, ಎಸ್.ಎಸ್. ಹೆಗಡಿಹಾಳ, ಆರ್.ಡಿ.ಜಾಧವ, ಬಿ.ಬಿ.ಬಿರಾದಾರ, ಬಿ.ಎ.ಪಾಟೀಲ, ಬಿ.ಬಿ.ಚವ್ಹಾಣ ಸೇರಿದಂತೆ ಅನೇಕ ವಕೀಲರು ಕಕ್ಷಿದಾರರ ಪರವಾಗಿ ವಕಾಲತ್ತು ವಹಿಸಿದ್ದರು.

# ಜಾನಪದ ವಿದ್ವಾಂಸ ಸಂಗಮೇಶ ಬಿರಾದಾರ ಗೆ 'ದೇಸಿ ಸನ್ಮಾನ' ಪ್ರಶಸ್ತಿ



**ಉದಯರಶ್ಮಿ ನ್ಯೂಸ್**

ಸಿಂದಗಿ: ಜಮಖಂಡಿಯ ಹಿರಿಯ ಜಾನಪದ ವಿದ್ವಾಂಸ ಡಾ.ಸಂಗಮೇಶ ಬಿರಾದಾರ ಅವರಿಗೆ 2024 ನೆಯ ಸಾಲಿನ 'ದೇಸಿ ಸನ್ಮಾನ' ಪ್ರಶಸ್ತಿಯನ್ನು ಘೋಷಿಸಲಾಗಿದೆ. ಸಿಂದಗಿಯ ನೆಲೆ ಪ್ರಕಾಶನ ಸಂಸ್ಥೆಯ ಅಂಗ ಸಂಸ್ಥೆಯಾದ 'ಎಂ.ಎಂ.ಪಡಶೆಟ್ಟಿ ಸಾಂಸ್ಕೃತಿಕ ಪ್ರತಿಷ್ಠಾನ ನೀಡುವ ಪ್ರಶಸ್ತಿ ಇದಾಗಿದ್ದು ಪ್ರತಿ ವರ್ಷ ನವೆಂಬರ ತಿಂಗಳ ಮೊದಲ ರವಿವಾರದಂದು ಸಿಂದಗಿಯಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ಏರ್ಪಡಿಸಲಾಗುತ್ತದೆ. ಪ್ರಶಸ್ತಿ ಪುರಸ್ಕೃತರಿಗೆ ರೂ.11000 ನಗದು ನೀಡುವುದರ ಜೊತೆಗೆ ಪುರಸ್ಕೃತರ ಜೀವನ ಸಾಧನೆಯನ್ನು ತಿಳಿಸುವ ಒಂದು ಗ್ರಂಥವನ್ನು ಬರೆಯಿಸಿ ಅರ್ಪಿಸಲಾಗುವುದು ಎಂದು ಸಂಚಾಲಕ ಡಾ.ಚನ್ನಪ್ಪ ಕಟ್ಟಿ ಹೇಳಿದ್ದಾರೆ. ನಾಡಿನ ಹಿರಿಯ ಜಾನಪದ ವಿದ್ವಾಂಸ ಡಾ.ಶ್ರೀರಾಮ ಇಟ್ಟಣ್ಣವರ ಹಾಗೂ ಬಿ.ಎಲ್.ಡಿ.ಇ.ಸಂಸ್ಥೆಯ ಡಾ.ಎಂ. ಎಸ್.ಮದಭಾವಿ ಅವರು ಆಯ್ಕೆ ಸಮಿತಿಯ ಸದಸ್ಯರಾಗಿದ್ದರು.

ಹಿನ್ನೆಲೆ: ಡಾ.ಸಂಗಮೇಶ ಬಿರಾದಾರ ಅವರು ಮೂಲತಃ ಜಮಖಂಡಿ ತಾಲೂಕಿನ ತುಂಗಳ ಗ್ರಾಮದವರು. ಪ್ರಚಾರ ಮತ್ತು ಪ್ರಸಿದ್ಧಿಗಳಿಂದ ದೂರವಿದ್ದು, ಜಾನಪದ ಸೇರಿದಂತೆ ಕವಿತೆ, ವಿಮರ್ಶೆ, ಜೀವನ ಚರಿತ್ರೆ, ಸಂಪಾದನೆ ಮುಂತಾದ ಕ್ಷೇತ್ರಗಳಲ್ಲಿ ಅವರು ಸಾಧನೆಗೈದಿದ್ದಾರೆ. ಗ್ರಾಮ ಪರಿಸರದಲ್ಲಿ ಜನಿಸಿ ಬೆಳೆದ ಅವರಿಗೆ ಜಾನಪದ ಅಧ್ಯಯನ ಆಸಕ್ತಿಯ ಕ್ಷೇತ್ರವಾಗಿತ್ತು. 'ಚಾಪ ಹಾಕತೀವ ಡಪ್ಪಿನ ಮ್ಯಾಲ ಎನ್ನುವ ಹೆಸರಿನ ಮೂರು ಸಂಪುಟಗಳನ್ನು ನಾಡಿನ ಜಾನಪದ ಲೋಕಕ್ಕೆ ಅರ್ಪಿಸಿದ್ದಾರೆ. 'ತೇರದಾಳದ ಲಾವಣಿಕಾರರು ಅವರ ಮತ್ತೊಂದು ಮಹತ್ವದ ಕೃತಿ. ಇಂಥ ವಿದ್ವಾಂಸರಿಗೆ ಪ್ರಶಸ್ತಿ ನೀಡಲು ಪ್ರತಿಷ್ಠಾನ ಹೆಮ್ಮೆ ಪಡುತ್ತದೆ ಎಂದು ಸಂಚಾಲಕ ಡಾ.ಚನ್ನಪ್ಪ ಕಟ್ಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚುನಾವಣೆ ಪ್ರಜಾಪ್ರಭುತ್ವದ ಗಟ್ಟಿ ನೆಲೆ :ಪ್ರಾ. ಲಮಾಣಿ



**ಉದಯರಶ್ಮಿ ನ್ಯೂಸ್**

ಸಿಂದಗಿ: ಪ್ರಜಾಪ್ರಭುತ್ವದ ಗಟ್ಟಿ ನೆಲೆಯಾಗಿರುವ ಚುನಾವಣಾ ಪ್ರಕ್ರಿಯೆಗಳ ಬಗ್ಗೆ ಮಕ್ಕಳಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಶಾಲಾ ಸಂಸತ್ತಿನ ಚುನಾವಣೆಯುನ್ನು ಚುನಾವಣೆಯ ಪ್ರಕ್ರಿಯೆಗಳ ಎಲ್ಲಾ ಹಂತಗಳ ಆಧಾರದ ಮೇಲೆ ಮೂಡಿಸಲಾಗುತ್ತಿದೆ ಎಂದು ಪ್ರಾಚಾರ್ಯ ವಿ.ಬಿ.ಲಮಾಣಿ ಹೇಳಿದರು.

ಪಟ್ಟಣದ ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆಯ ಶ್ರೀಪದ್ಮರಾಜ ಪಬ್ಲಿಕ್ ಶಾಲೆಯಲ್ಲಿ 2024–25 ನೇ ಸಾಲಿನ ಶಾಲಾ ಸಂಸತ್ತು ರಚನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಚುನಾವಣೆಯು ಪ್ರಕ್ರಿಯೆಗಳ ಜ್ಞಾನವನ್ನು ಮಕ್ಕಳಲ್ಲಿ ಮೂಡಿಸುವುದು ಅಗತ್ಯವಾಗಿದೆ. ಇಂದಿನ ಮಕ್ಕಳೇ ನಾಳಿನ ನಾಗರಿಕರು ಎಂಬ ಮಾತಿನಂತೆ ನಾಗರಿಕತ್ವದ ಪ್ರಜ್ಞೆಯನ್ನು ಹಾಗೂ ಚುನಾವಣಾ ಆಯೋಗದ ಅನೇಕ ನೀತಿ ನಿಯಮಗಳನ್ನು ಶಾಲಾ ಸಂಸತ್ತಿನ ಚುನಾವಣೆಯ ಮೂಲಕ ಮಕ್ಕಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರು ಚುನಾವಣಾ ಅಧಿಕಾರಿಗಳಾಗಿ ಕಾರ್ಯ ನಿರ್ವಹಿಸಿದರು.

ಶಾಲಾ ಸಂಸತ್ತು ರಚನಾ ಕಾರ್ಯಕ್ರಮದಲ್ಲಿ ಶಾಲೆಯ ಸಿಬ್ಬಂದಿಗಳಾದ ರಾಣಿ ಜೋಗೂರ, ಕೆ.ಎಸ್.ಲಾತೂರ, ಎಸ್.ಎಸ್.ಪೋದ್ದಾರ, ಸಾವಿತ್ರಿ ಹಾಲಕೇರಿ, ಶ್ರೀಧರ ಮಲ್ಲೇದ, ಅರುಣಾ ಕವಲಗಿ, ಅಕ್ಷತಾ ಕಿಣಗಿ, ವಿಜಯಲಕ್ಷ್ಮೀ ಚೌಧರಿ, ಭಾರತಿ ಹಿರೇಮಠ, ನೀಲಮ್ಮ ಮಾರ್ಸನಳ್ಳಿ, ನೀಲಮ್ಮ ಬಿರಾದಾರ್, ಅಭಿಷೇಕ ಬಿರಾದಾರ, ಕಲಾವತಿ ಹಿರೇಮಠ, ಸುರೇಶ ಸುಣಗಾರ ಸೇರಿದಂತೆ ಇತರರು ಇದ್ದರು.

ಉದಯರಶ್ಮಿ
ಪ್ರತಿ ಮನೆ-ಮನದ ಸಂಗಾತಿ

# ಅಪಘಾತ ತಗ್ಗಿಸಲು ಸುರಕ್ಷತಾ ಉಪಕ್ರಮ ಕೈಗೊಳ್ಳಿ :ಡಿಸಿ ಟಿ.ಭೂಬಾಲನ್

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯಲ್ಲಿ ಅಪಘಾತ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸಿಗ್ನಲ್-ರೋಡ ಬ್ಯಾರಿಕೇಡ್, ಮಾಹಿತಿ ಫಲಕ, ತಿರುವು ರಸ್ತೆಗಳ ಮಾಹಿತಿ, ವೃತ್ತಗಳ ಮಾಹಿತಿ ಅಳವಡಿಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ರಸ್ತೆ ಅಪಘಾತಗಳನ್ನು ತಡೆಗಟ್ಟಲು ರಸ್ತೆ ಸಂಚಾರ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ತಿಳುವಳಿಕೆ ನೀಡಬೇಕು. ರಸ್ತೆಯ ಸುಧಾರಣೆ ಕೈಗೊಂಡು ರಾಷ್ಟ್ರೀಯ ಹೆದ್ದಾರಿಗಳಲ್ಲಿ ಅಪಘಾತ ಸಂಭವಿಸಿದ ಸಂದರ್ಭದಲ್ಲಿ ತಕ್ಷಣ ಸೂಕ್ತ ಸಮಯದಲ್ಲಿ ಚಿಕಿತ್ಸೆ ಒದಗಿಸಲು ಅನುಕೂಲವಾಗುವ ನಿಟ್ಟಿನಲ್ಲಿ ಅಂಬ್ಯುಲೆನ್ಸ್ ವ್ಯವಸ್ಥೆ ಸೇರಿದಂತೆ ತುರ್ತು ವೈದ್ಯಕೀಯ ವ್ಯವಸ್ಥೆ ಒದಗಿಸಲು ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಅಪಘಾತ ಪ್ರಕರಣಗಳು ಸಂಭವಿಸಿದ ಸಂದರ್ಭಧಲ್ಲಿ ಸಾವು ನೋವುಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ತುರ್ತು ವೈದ್ಯಕೀಯ ಚಿಕಿತ್ಸೆ ಒದಗಿಸಲು ಹೆದ್ದಾರಿಗಳಲ್ಲಿ ತುರ್ತು ದೂರವಾಣಿ 108 ಹೆದ್ದಾರಿ ಹೆಲ್ಪ್‌ಲೈನ್ 1033 ಟೋಲ್‌ಫ್ರೀ ಫಲಕಗಳನ್ನು ಅಳವಡಿಸಬೇಕು. ಈ ದೂರವಾಣಿಗಳಿಗೆ ಬಂದಿರುವ ಕರೆಗಳಿಗೆ ತುರ್ತಾಗಿ ಸ್ಪಂದಿಸಬೇಕು. ತುರ್ತು ಸಂದರ್ಭಗಳಲ್ಲಿ ಯಾವುದೇ ನಿರ್ಲಕ್ಷ್ಯ ತೋರದೇ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು. ಆದ್ಯತೆ ಮೇಲೆ ಕಾರ್ಯನಿರ್ವಹಿಸುವಂತೆ ಅವರು ಸೂಚನೆ ನೀಡಿದರು.



ಜಿಲ್ಲಾ ಆಸ್ಪತ್ರೆಯ ಶಸ್ತ್ರ ಚಿಕಿತ್ಸಕ ಡಾ.ಶಿವಾನಂದ ಮಾಸ್ತಿಹೊಳಿ ಸಭೆಗೆ ಮಾಹಿತಿ ನೀಡಿ, ಜಿಲ್ಲಾಸ್ಪತ್ರೆಯ ಟ್ರಾಮಾ ಸೆಂಟರ್‌ನಲ್ಲಿ ಅಪಘಾತ ಪ್ರಕರಣಗಳಿಗೆ ಆದ್ಯತೆಯ ಮೇರೆಗೆ ಚಿಕಿತ್ಸೆ ಒದಗಿಸಲಾಗುತ್ತಿದೆ ಎಂದು ಹೇಳಿದರು.

ವಿಜಯಪುರ ನಗರದ ಗಾಂಧಿವೃತ್ತದಿಂದ ಆರಂಭವಾಗುವ ರಸ್ತಗೆಗಳಲ್ಲಿ ಅಡ್ಡಾದಿಡ್ಡಿಯಾಗಿ ವಾಹನ ಸಂಚಾರ ಮಾಡದಂತೆ ಕ್ರಮ ವಹಿಸಬೇಕು. ಪಾದಚಾರಿಗಳಿಗು ಸಹ ಯಾವುದೇ ತೊಂದರೆಯಾಗದಂತೆ ನೋಡಿಕೊಂಡು ರಸ್ತೆ ಸುರಕ್ಷತಾ ನಿಯಮಗಳನ್ನು ಪಾಲಿಸಲು ಕ್ರಮ ವಹಿಸಬೇಕು. ನಗರದೊಳಗೆ ಅವಶ್ಯಕವಿದ್ದೆಡೆ ಮಾತ್ರ ರೋಡ್ ಬ್ರೇಕ್ ಅಳವಡಿಕೆಗೆ ಕ್ರಮ ವಹಿಸಬೇಕು. ಹೆದ್ದಾರಿ ಪೆಟ್ರೋಲಿಂಗ್ ವಾಹನ ಹಗಲು-ರಾತ್ರಿ ಗಸ್ತು ನಡೆಸುವಂತೆ ನೋಡಿಕೊಳ್ಳಬೇಕು ಎಂದು ಅವರು ಸೂಚನೆ ನೀಡಿದರು.

ಶಾಲಾ ಮಕ್ಕಳು ದ್ವಿಚಕ್ರ ವಾಹನ ಬಳಕೆ ಹಾಗೂ ರಸ್ತೆ ಸುರಕ್ಷತಾ ನಿಯಮಗಳ ಕುರಿತು ಸೂಕ್ತ ಜಾಗೃತಿ ಮೂಡಿಸಬೇಕು. ಶಾಲೆಗಳಲ್ಲಿ ರಸ್ತೆ ಸುರಕ್ಷತಾ ಅನುಸರಿಸುವ ಅರಿವು ಕಾರ್ಯಕ್ರಮ ಹಮ್ಮಿಕೊಂಡು ಜಾಗೃತಿ ಮೂಡಿಸಬೇಕು. ಶಾಲಾ ವಾಹನಗಳಿಗೆ ಅನುಮತಿ ನೀಡುವಾಗ ಸಮರ್ಪಕವಾಗಿ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಬೇಕು. ಶಾಲಾ ವಾಹನಗಳು ರಸ್ತೆ ಸುರಕ್ಷತಾ ನಿಯಮಗಳನ್ನು ಪಾಲಿಸುವ ಕುರಿತು ಪರಿಶೀಲನೆ ನಡೆಸಬೇಕು.

ಅಳಗಿನಾಳದ ಹತ್ತಿರ ರಸ್ತೆಯ ಪಕ್ಕದಲ್ಲಿ ಬಾವಿ ಇದ್ದು, ರಸ್ತೆ ಪಕ್ಕದಲ್ಲಿರುವುದರಿಂದ ವಾಹನ ಸವಾರರಿಗೆ ಅಪಾಯಕಾರಿಯಾಗಿದ್ದು, ಯಾವುದೇ ಅವಘಡಗಳು ಸಂಭವಿಸಿದಂತೆ ಸೂಕ್ತ ಸುರಕ್ಷತಾ ಕ್ರಮ ವಹಿಸಬೇಕು. ರಾಷ್ಟ್ರೀಯ ಹೆದ್ದಾರಿಯಲ್ಲಿನ ಅಪಘಾತ ಸ್ಥಳಗಳಲ್ಲಿ ಇಂದಿನ ಸಭೆಯಲ್ಲಿ ನೀಡಿದ ನಿರ್ದೇಶನಗಳನ್ನು ಚಾಚುತಪ್ಪದೇ ಪಾಲಿಸಿ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ವಹಿಸಿ, ಅಪಘಾತ ತಪ್ಪಿಸಿ ಅಮೂಲ್ಯ ಜೀವ ಉಳಿಸುವ ಕಾರ್ಯದಲ್ಲಿ ನಿರ್ಲಕ್ಷ್ಯ ವಹಿಸದೇ ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವಂತೆ ಅವರು ಸೂಚನೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಶ ಸೋನಾವಣೆ ಅವರು ಮಾತನಾಡಿ, ಹಡಗಲಿ-ದೇವರಹಿಪ್ಪರಗಿ ಮಾಗ, ವಿಜಯಪುರ ನಗರದ ಪಾಟೀಲ್ ಪ್ಲಾನೆಟ್ ಲಿಂಗದ್ ಗುಡಿ ರಸ್ತೆ, ವಿಜಯಪುರ ಸೋಲಾಪುರ ಮಾರ್ಗದಲ್ಲಿನ ಹಳಗುಣಕಿ ಕ್ರಾಸ್ ಹತ್ತಿರ ಅಗಸನಾಳ ಸೇರಿದಂತೆ ಮುಂತಾದ ಅಪಘಾತ ಸ್ಥಳಗಳಲ್ಲಿ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಟಿ ಜಂಕ್ಷನ್ ಸ್ಥಳದಲ್ಲಿ ಸೂಕ್ತ ಬೆಳಕಿನ ವ್ಯವಸ್ಥೆ, ಸೈನೇಜ್ ವ್ಯವಸ್ಥೆ ಮಾಡಿ ಪರಿಹಾರ ಕ್ರಮಗಳನ್ನು ಕೈಗೊಂಡು ಅಪಘಾತ ತಪ್ಪಿಸಲು ಕ್ರಮವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ರಾಜು ಮುಜುಮದಾರ ಅವರು ಈ ಹಿಂದಿನ ಸಭೆಯ ನಿರ್ದೇಶನದಂತೆ ಕೈಗೊಂಡ ಕ್ರಮಗಳ ಕುರಿತು ಮಾಹಿತಿ ನೀಡಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ವಿಜಯಪುರ ಉಪವಿಭಾಗಾಧಿಕಾರಿ ಬಸವಣೆಪ್ಪ ಕಲಶೆಟ್ಟಿ, ಇಂಡಿ ಉಪ ವಿಭಾಗಾಧಿಕಾರಿ ಆಬಿದ ಗದ್ಯಾಳ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

### ಚುನಾವಣೆ ಟಾಸ್ಕ್‌ನಲ್ಲಿ ಸೋತ ಸಚಿವರನ್ನು ಸಂಪುಟದಿಂದ ಕೈಬಿಡಲು ಮಾಲಿಕಯ್ಯ ಗುತ್ತೇದಾರ ಆಗ್ರಹ

# ಕಲಬುರ್ಗಿಯ ಧ್ವನಿಯಾಗಿ ಕೆಲಸ ಮಾಡುವೆ :ಸಂಸದ ರಾಧಾಕೃಷ್ಣ

**ಉದಯರಶ್ಮಿ ನ್ಯೂಸ್**

ಅಫಜಲಪುರ: ಕಲಬುರಗಿ ಲೋಕಸಭೆಯಿಂದ ಮತದಾರರು ನನ್ನನ್ನು ಆಯ್ಕೆ ಮಾಡಿ ಲೋಕಸಭೆಗೆ ಕಳಿಸಿದ್ದಾರೆ, ನಾನು ಕಲಬುರಗಿ ಧ್ವನಿಯಾಗಿ ಸಂಸತ್ತಿನಲ್ಲಿ ಕೆಲಸ ಮಾಡುತ್ತೇನೆ ಎಂದು ಸಂಸದ ರಾಧಾಕೃಷ್ಣ ದೊಡ್ಮನಿ ಹೇಳಿದರು.

ಪಟ್ಟಣದ ಸರಸಂಬಾ ಕಲ್ಯಾಣ ಮಂಟಪದಲ್ಲಿ ನಡೆದ ಮತದಾರರಿಗೆ ಅಭಿನಂದನಾ ಸಮಾರಂಭದಲ್ಲಿ ಮಾತನಾಡುತ್ತಾ, ಮತದಾರರು ಬಹಳ ದೊಡ್ಡ ಜವಾಬ್ದಾರಿ ನೀಡಿದ್ದಾರೆ. ಎಲ್ಲರ ಕಣ್ಣು ಕಲಬುರಗಿ ಮೇಲಿತ್ತು. ಆದರೆ ಮತದಾರರು ಕಾಂಗ್ರೆಸ್ ಪಕ್ಷದ ಮೇಲೆ ಭರವಸೆ ಇಟ್ಟು ನನ್ನನ್ನು ಆಯ್ಕೆ ಮಾಡಿದ್ದಾರೆ. ಪಕ್ಷದ ಹಿರಿಯರು, ಶಾಸಕರು, ಸಚಿವರು, ಮುಖಂಡರು, ಕಾರ್ಯಕರ್ತರು,



ಕ್ಷೇತ್ರದ ಮತದಾರರ ಅಭಿಪ್ರಾಯ, ಸಲಹೆ ಪಡೆದು ಅಭಿವೃದ್ಧಿ ಕೆಲಸಗಳನ್ನು ಮಾಡುತ್ತೇನೆ ಎಂದರು.

ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ ಮಾತನಾಡುತ್ತಾ, ಹಿಂದಿನ ಲೋಕಸಭೆ ಚುನಾವಣೆಯಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರು ಸ್ಪರ್ಧೆ ಮಾಡಿದ್ದ ಸಂದರ್ಭದಲ್ಲಿ ಅಫಜಲಪುರ ಮತಕ್ಷೇತ್ರದಿಂದ 37 ಸಾವಿರ ಮತಗಳು ಬಿಜೆಪಿಗೆ ಲೀಡ್ ಬಂದಿದ್ದರಿಂದ ಖರ್ಗೆ ಅವರು ಸೋಲಬೇಕಾಯಿತು. ಆದರೆ ಈ ಬಾರಿ ಲೀಡ್ ಕಡಿಮೆಯಾಗಿ ಕಾಂಗ್ರೆಸ್ ಪಕ್ಷಕ್ಕೆ ಮತಗಳು ಬಂದಿದ್ದರಿಂದ ರಾಧಾಕೃಷ್ಣ ದೊಡ್ಮನಿ ಅವರಿಗೆ ಗೆಲುವಾಗಿದೆ ಎಂದರು.

ಶಾಸಕ ಎಂ.ವೈ ಪಾಟೀಲ್ ಮಾತನಾಡುತ್ತಾ ಈ ಲೋಕಸಭೆ ಚುನಾವಣೆಯಲ್ಲಿ ಸಾಕಷ್ಟು ಶ್ರಮ ವಹಿಸಿ ಮತದಾರರಿಗೆ ಮನವಿ ಮಾಡಿದರೂ ಕೂಡ ನಮ್ಮ ನಿರೀಕ್ಷೆಯಷ್ಟು ಮತಗಳು ಬರಲಿಲ್ಲ. ಹೀಗಾಗಿ ಸಂಸದರು ಮತದಾರರಿಗೆ ಅಭಿನಂದನೆಗಳು ಸಲ್ಲಿಸಲು ಬಂದಿದ್ದಾರೆ. ಆದರೆ ಅಭಿನಂದನೆ ಸ್ವಿಕರಿಸಲು ನಮಗೆ ಮನಸ್ಸಾಗುತ್ತಿಲ್ಲ. ಇಷ್ಟಾದರೂ ಕೂಡ ಸಂಸದರು ಅಭೀನಂದನೆ ಸಲ್ಲಿಸಲು ಬಂದಿದ್ದು ಅವರ ಹೃದಯ ವೈಶಾಲ್ಯತೆ ತೋರಿಸುತ್ತದೆ ಎಂದರು.

ಇನ್ನೂ ತಾಲೂಕಿನ ಅಭಿವೃದ್ಧಿಯ ದೃಷ್ಟಿಯಿಂದ ಕರ್ಜಗಿಯಿಂದ ಅಫಜಲಪುರದ ವರೆಗಿನ 22 ಕಿ.ಮೀ ರಾಷ್ಟ್ರೀಯ ಹೆದ್ದಾರಿಯನ್ನು ಸಾರಿಗೆ ಸಚಿವ ಗಡ್ಕರಿ ಅವರಿಗೆ ಹೇಳಿ ಮಂಜೂರು ಮಾಡಿಸಿಕೊಟ್ಟರೆ ಅನುಕೂಲವಾಗಲಿದೆ ಎಂದರು.

ಮುಖ್ಯಮಂತ್ರಿಗಳ ಸಲಹೆಗಾರ ಶಾಸಕ ಬಿ.ಆರ್ ಪಾಟೀಲ್ ಮಾತನಾಡುತ್ತಾ ಮಲ್ಲಿಕಾರ್ಜುನ ಖರ್ಗೆ ಅವರು ಮಾಡಿದ ಅಭಿವೃದ್ಧಿ ಕೆಲಸಗಳಿಂದೇ ಕಲ್ಯಾಣ ಕರ್ನಾಟಕದಲ್ಲಿ ಎಲ್ಲಾ ಕ್ಷೇತ್ರಗಳನ್ನು ಕಾಂಗ್ರೆಸ್ ಪಕ್ಷ ಗೆಲ್ಲುವಂತಾಗಿದೆ. ನೂತನ ಸಂಸದರು ಹಿಂದುಳಿದ ಈ ಭಾಗದ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕೆಂದರು.

ಕೆಪಿಸಿಸಿ ಸದಸ್ಯ ಅರುಣಕುಮಾರ ಪಾಟೀಲ್ ಮಾತನಾಡುತ್ತಾ, ರಾಧಾಕೃಷ್ಣ ದೊಡ್ಮನಿ ಅವರು ಯಾವತ್ತು ಅಧಿಕಾರಕ್ಕೆ ಬಯಸಿ ಜನರ ಮಧ್ಯದಲ್ಲಿದ್ದವರಲ್ಲ. ಈಗ ಅವರು ಸಂಸದರಾಗಿದ್ದಾರೆ. ಆದರೂ ಅವರು ಎಂದಿನಂತೆ ಸರಳತೆಯಿಂದಲೇ ಇದ್ದಾರೆ. ಮೊದಲಿನಂತೆ ಜನಸೇವೆ ಮಾಡುವ ಮೂಲಕ ತಾವು ನಿಜವಾದ ಜನಸೇವಕ ಎನ್ನುವುದುನ್ನು ಸಾಬೀತು ಮಾಡುತ್ತಿದ್ದಾರೆ ಎಂದರು.

ಮಾಜಿ ಸಚಿವ ರೇವುನಾಯಕ ಬೆಳಮಗಿ, ಪರಿಷತ್ ಸದಸ್ಯ ಜಗದೇವ ಗುತ್ತೇದಾರ ಮಾತನಾಡಿದರು.

ಈ ಸಂದರ್ಭದಲ್ಲಿ ತಿಪ್ಪಣ್ಣಪ್ಪ ಕಮಕನೂರ, ಪಪ್ಪು ಪಟೇಲ, ಮಕ್ಬೂಲ ಪಟೇಲ, ಜೆ.ಎಂ ಕೊರಬು, ಮಶಾಕ ಪಟೇಲ, ಲಚ್ಚಪ್ಪ ಜಮಾದಾರ, ಮತೀನ ಪಟೇಲ, ಸಾಯಬಣ್ಣ ನೀಲಪ್ಪಗೋಳ, ಚಂದು ಕರ್ಜಗಿ, ಸಿದ್ದಯ್ಯ ಹಿರೇಮಠ, ರಾಜುಗೌಡ ಅವರಳ್ಳಿ, ಸಿದ್ದಾರ್ಥ ಬಸರಿಗಿಡ, ಸಿದ್ದು ಸಿರಸಗಿ, ಅರವಿಂದ ಗುತ್ತೇದಾರ, ರೇಣುಕಾ ಸಿಂಗೆ, ಸಂಧ್ಯಾ ಪವಾರ, ಜ್ಯೋತಿ ಮರಗೋಳ, ಹನುಮಂತ್ರಾವ ದೊಡ್ಮನಿ, ಪ್ರಕಾಶ ಜಮಾದಾರ, ಸಿದ್ದು ದಿಕ್ಸಂಗಿ, ಗೌತಮ ಸಕ್ಕರಗಿ, ಚಂದು ದೇಸಾಯಿ, ಶರಣು ಕುಂಬಾರ, ಶಿವಾನಂದ ಗಾಡಿ, ರಮೇಶ ಪೂಜಾರಿ ಸೇರಿದಂತೆ ಅನೇಕರು ಇದ್ದರು.

> ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ನಾನು ಮತ್ತು ಎಂ.ವೈ ಪಾಟೀಲ್ ಅವರು ಸಾಕಷ್ಟು ಶ್ರಮ ವಹಿಸಿ ಮತದಾರರಿಗೆ ತಲುಪಿದ್ದೇವೆ. ನಮ್ಮ ಚುನಾವಣೆಗಿಂತಲೂ ಹೆಚ್ಚು ಶ್ರಮ ಹಾಕಿದ್ದೇವೆ. ಆದರೂ ನಮ್ಮ ನಿರೀಕ್ಷೆಗೆ ತಕ್ಕ ಮತಗಳು ಬರಲಿಲ್ಲ. ಸಂಸದರು ಅಭಿನಂದನೆ ಸಲ್ಲಿಸಲು ಬಂದಿದ್ದಾರೆ. ಆದರೆ ನಮ್ಮಿಬ್ಬರಿಗೆ ಇದು ಬಹಳ ನೋವು ತಂದಿದೆ. ಮಲ್ಲಿಕಾರ್ಜುನ ಖರ್ಗೆ ಅವರ ಸೇವೆ ಗುರುತಿಸಿಯಾದರೂ ಜನ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಬೇಕಾಗಿತ್ತು. ಎಂದ ಅವರು ರಾಜ್ಯದಲ್ಲಿ ಇನ್ನೂ ಸಾಕಷ್ಟು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲ್ಲಬೇಕಾಗಿತ್ತು. ಆದರೆ ಸಚಿವರಿಗೆ ಕೊಟ್ಟ ಟಾಸ್ಕ್‌ನಲ್ಲಿ ಸಚಿವರು ವಿಫಲವಾಗಿದ್ದಾರೆ. ಅಂತಹ ಸಚಿವರನ್ನು ಸಂಪುಟದಿಂದ ಕೈಬಿಡಬೇಕು. ಮತ್ತು ಕೊನೆಯ ಚುನಾವಣಾ ರಾಜಕೀಯ ಮಾಡುತ್ತಿರುವ ಶಾಸಕ ಎಂ.ವೈ ಪಾಟೀಲ್ ಅವರಿಗೆ ಸಚಿವ ಸ್ಥಾನ ನೀಡಿ ಗೌರವಿಸುವ ಕೆಲಸ ಸರ್ಕಾರ ಮಾಡಬೇಕು."
>
> – **ಮಾಲೀಕಯ್ಯ ಗುತ್ತೇದಾರ,** ಮಾಜಿ ಸಚಿವರು

> " ಕಲಬುರಗಿ ಮತದಾರರು ಅಭಿವೃದ್ದಿ ಪರವಾದ ವ್ಯಕ್ತಿಗೆ ಮತ ನೀಡಿ ಗೆಲ್ಲಿಸಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಅವರು ಈ ಭಾಗಕ್ಕೆ ಮಾಡಿದ ಉಪಕಾರವನ್ನು ಮತದಾರರು ತಮ್ಮ ಮತವನ್ನು ಕಾಂಗ್ರೆಸ್ ಪಕ್ಷಕ್ಕೆ ನೀಡುವ ಮೂಲಕ ಉಪಕಾರ ತೀರಿಸಿದ್ದಾರೆ. ಈ ಲೋಕಸಭೆಯಲ್ಲಿ ಕೆಲವು ಲೋಪದೋಷಗಳಿಂದಾಗಿ ನಿಚ್ಚಳವಾಗಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರುವುದು ತಪ್ಪಿದಂತಾಗಿದೆ. ಆದರೂ ಈ ಬಾರಿಯ ಕೇಂದ್ರ ಸರ್ಕಾರ ಹೆಚ್ಚು ದಿನ ಉಳಿಯುವುದಿಲ್ಲ. ಆರು ತಿಂಗಳಲ್ಲಿ ಸರ್ಕಾರ ಪತನವಾಗಲಿದ್ದು ಇಂಡಿಯಾ ಮೈತ್ರಿಕೂಟದ ಸರ್ಕಾರ ರಚನೆ ಆಗಲಿದೆ."
>
> – **ಸಿದ್ದರಾಮ ಮೇತ್ರಿ,** ಮಾಜಿ ಗೃಹ ಸಚಿವರು, ಮಹಾರಾಷ್ಟ್ರ

### ಕಾಲೇಜಿಗೆ ತೆರಳುವ ವಿದ್ಯಾರ್ಥಿಗಳ ಪರದಾಟ | ಉಮರಜ, ರೇವತಗಾಂವ, ಶಿರಾಡೋಣ, ಹಾಲಳ್ಳಿ ವಿದ್ಯಾರ್ಥಿಗಳ ಗೋಳು ಕೇಳುವವರಿಲ್ಲ

# ಬಸ್ ಹತ್ತಲು ವಿದ್ಯಾರ್ಥಿಗಳ ಸರ್ಕಸ್ :ಆಯ ತಪ್ಪಿದರೆ ಅಪಾಯ!

**ಉದಯರಶ್ಮಿ ನ್ಯೂಸ್**

– ಸಿದ್ರಾಮ ಮಾಳಿ

ರೇವತಗಾಂವ: ತಾಲೂಕಿನ ಬಹುತೇಕ ಗ್ರಾಮಗಳಿಂದ ವಿದ್ಯಾಭ್ಯಾಸಕ್ಕೆ ಹೋಗುವ ವಿದ್ಯಾರ್ಥಿಗಳು ನಿತ್ಯವೂ ಶಾಲಾ-ಕಾಲೇಜಿಗೆ ಬಸ್‌ನಲ್ಲಿ ಹೋಗಬೇಕೆಂದರೆ ಸರ್ಕಸ್ ಮಾಡಬೇಕು. ಇಲ್ಲವಾದರೆ, ತರಗತಿಯೂ ಸಿಗಲ್ಲ, ಮನೆಯಲ್ಲಿ, ಶಾಲಾ, ಕಾಲೇಜುಗಳಲ್ಲಿ ಬೈಸಿಕೊಳ್ಳುವುದು ತಪ್ಪಲ್ಲ!

ತಾಲೂಕಿನ ಬಹುತೇಕ ಗ್ರಾಮಗಳಿಂದ ತಾಲೂಕು ಕೇಂದ್ರಗಳಿಗೆ ವಿದ್ಯಾಭ್ಯಾಸಕ್ಕಾಗಿ ಹೋಗುವ ಸಾವಿರಾರು ವಿದ್ಯಾರ್ಥಿಗಳು ಬೆಳಗ್ಗೆ ಮತ್ತು ಸಾಯಂಕಾಲದ ಸಮಯದಲ್ಲಿ ಎದುರಿಸುತ್ತಿರುವ ನಿತ್ಯದ ಸಮಸ್ಯೆ




ಇದು. ಪಟ್ಟಣ ಸೇರಿದಂತೆ ಗ್ರಾಮೀಣ ಪ್ರದೇಶದಲ್ಲಿ ರೈತರು ಹಾಗೂ ಕೂಲಿ ಕಾರ್ಮಿಕರ ಮಕ್ಕಳನ್ನು ನಗರ ಪ್ರದೇಶದಲ್ಲಿನ ಕಾಲೇಜಿಗೆ ಹೋಗುತ್ತಾರೆ. ಬಹುತೇಕರು ಸರಕಾರಿ ಸಾರಿಗೆಯನ್ನೇ ಆಶ್ರಯಿಸಿದ್ದಾರೆ.

ವಿದ್ಯಾರ್ಥಿಗಳು ಹಣ ವ್ಯಯಿಸಿ ಸಾರಿಗೆ ಸಂಸ್ಥೆಯ ಬಸ್ ಪಾಸ್ ಪಡೆದರೂ, ಉಪಯೋಗವಿಲ್ಲದಂತಾಗಿದೆ. ಮಕ್ಕಳಿಗೆ ಬೆಳಗ್ಗೆ ಸಂಚರಿಸುವ ಬಸ್‌ಗಳಲ್ಲಿ ಜೀವವನ್ನು ಕೈಯಲ್ಲಿ ಹಿಡಿದು ಸರ್ಕಸ್ ಮಾಡಿಕೊಂಡು ಉಮರಜ, ರೇವತಗಾಂವ, ಶಿರಾಡೋಣ, ಹಾಲಳ್ಳಿ ಗ್ರಾಮಗಳಿಗೆ ಸೇರಬೇಕಾದ ದುಃಸ್ಥಿತಿ ಇದೆ. ಕೆಲವೊಮ್ಮೆ ಬಸ್‌ನ ಬಾಗಿಲಿನಲ್ಲಿ ನೇತಾಡಿಕೊಂಡು ಬಂದ ಹಲವು ಪ್ರಸಂಗಗಳು ಇವೆ.

ನಿಯಂತ್ರಣ ತಪ್ಪಿದರೆ ಅನಾಹುತ ಗ್ಯಾರಂಟಿ: ಇನ್ನು ಶಿರಾಡೋಣದಿಂದ ರೇವತಗಾಂವದವರೆಗೆ ಇರುವುದು ರಸ್ತೆ ಅಷ್ಟಕಷ್ಟೇ. ಬಸ್ ಚಾಲಕನ ನಿಯಂತ್ರಣ ತಪ್ಪದರೆ ದೊಡ್ಡ ಅನಾಹುತವೇ ಸಂಭವಿಸುತ್ತದೆ. ಬೆಳಗ್ಗೆ ಮತ್ತು ಸಾಯಂಕಾಲದ ಸಮಯದಲ್ಲಿ ಉಮರಜದಿಂದ ರೇವತಗಾಂವ, ಶಿರಾಡೋಣ ಮಾರ್ಗವಾಗಿ ಚಡಚಣಕ್ಕೆ ಹೋಗುವಾಗ ಮತ್ತು ಬರುವಾಗ ನೂರಾರು ಜನ ಪ್ರಾಣವನ್ನು ಅಂಗೈಯಲ್ಲಿ ಇಟ್ಟುಕೊಂಡು ಪ್ರಯಾಣಿಸುತ್ತಿದ್ದಾರೆ. ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಹೆಚ್ಚಿನ ಬಸ್ ಸೌಲಭ್ಯ ಕಲ್ಪಿಸಿದರೆ ವಿದ್ಯಾರ್ಥಿಗಳು ಹಾಗೂ ನಾಗರಿಕರ ಪರದಾಟ ತಪ್ಪುತ್ತದೆ ಎಂಬುದು ಪ್ರಯಾಣಿಕರ ಮನವಿ.

ವಿದ್ಯಾರ್ಥಿನಿಯರ ಅಳಲು: ಕಾಲೇಜಿಗೆ ಬರುವ ವಿದ್ಯಾರ್ಥಿನಿಯರು ತಳ್ಳಾಟ, ನೂಕಾಟದಲ್ಲಿ ಸಿಲುಕಿ ಅಸಹನೀಯ ಯಾತನೆ ಅನುಭವಿಸುತ್ತಿದ್ದಾರೆ. ಗ್ರಾಮೀಣ ಪ್ರದೇಶಗಳಿಂದ ಕಷ್ಟಪಟ್ಟು ಕಾಲೇಜಿಗೆ ಬರುವುದೂ ಸಾಕು, ಇಂಥ ಸಂಕಷ್ಟದಲ್ಲಿ ನಿತ್ಯ ಪ್ರಯಾಣಿಸುವುದು ಸಾಕು. ಬಸ್‌ಗಳಲ್ಲಿ ಕಾಲೇಜಿನ ವಿದ್ಯಾರ್ಥಿನಿಯರಿಗೆ ಯಾವುದೇ ಸುರಕ್ಷತೆ ಇಲ್ಲದಂತಾಗಿದೆ ಎಂಬುದು ವಿದ್ಯಾರ್ಥಿನಿಯರ ಅಳಲು.

ಶಾಲಾ ಮಕ್ಕಳ ಪರಿಸ್ಥಿತಿಯಂತೂ ಇನ್ನೂ ಶೋಚನೀಯ, ಕಾಲೇಜು ವಿದ್ಯಾರ್ಥಿಗಳ ನಡುವೆ ಪೈಪೋಟಿ ನಡೆಸಿ ಬ್ಯಾಗ್ ಹೊತ್ತು ಬಸ್‌ಗೆ ಹತ್ತಲು ವಿದ್ಯಾರ್ಥಿಗಳು ಹಿಮಾಲಯ ಪರ್ವತ ಹತ್ತಿದಷ್ಟೇ ಪ್ರಯಾಸ ಪಡಬೇಕಿದೆ. ಕೆಲವು ಕಾಲೇಜು ವಿದ್ಯಾರ್ಥಿಗಳು ಫುಟ್‌ಬೋರ್ಡ್ ಮೇಲೆ ನೇತಾಡಿಕೊಂಡೇ ಪ್ರಯಾಣಿಸಿ ಅಪಾಯಕ್ಕೆ ಆಹ್ವಾನ ನೀಡುವಂತಿದೆ.

# ಆರೋಗ್ಯ ಶಿಬಿರಗಳ ಲಾಭ ಪಡೆದುಕೊಳ್ಳಲು ಕವಲಗಿ ಸಲಹೆ

**ಉದಯರಶ್ಮಿ ನ್ಯೂಸ್**

ಅಫಜಲಪುರ: ಢೆಂಗಿ ಮಹಾಮಾರಿ ಹೆಚ್ಚುತ್ತಿರುವ ಹಿನ್ನೆಲೆ ತಾಲೂಕಿನಾದ್ಯಂತ ಉಚಿತ ಆರೋಗ್ಯ ಶಿಬಿರಗಳನ್ನು ಆಯೋಜಿಸಲಾಗಿದ್ದು ಜನ ಇದರ ಲಾಭ ಪಡೆದುಕೊಳ್ಳಿ ಎಂದು ತಾ.ಪಂ ಇಒ ವೀರಣ್ಣ ಕವಲಗಿ ಸಲಹೆ ನೀಡಿದರು.

ಅವರು ತಾಲೂಕಿನ ಆನೂರ ಗ್ರಾಮದಲ್ಲಿ ಗ್ರಾ.ಪಂ ಆನೂರ, ತಾಪಂ ಅಫಜಲಪುರ ಹಾಗೂ ಆರೋಗ್ಯ ಇಲಾಖೆಯ ಸಹಯೋಗದಲ್ಲಿ ನಡೆದ ಉಚಿತ ಆರೋಗ್ಯ ಶಿಬಿರದಲ್ಲಿ ಮಾತನಾಡುತ್ತಾ ತಾಲೂಕಿನಲ್ಲಿ ಢೆಂಗಿ ಪ್ರಕರಣಗಳು ಹೆಚ್ಚಾಗುತ್ತಿವೆ. ಹೀಗಾಗಿ ಗ್ರಾಮೀಣ ಭಾಗಗಳಲ್ಲಿ ನೈರ್ಮಲ್ಯ ಸಮಸ್ಯೆ ಬಾರದಂತೆ ತಡೆಯಲು ಗ್ರಾಮ ಪಂಚಾಯಿತಿಯವರಿಗೆ ಕಟ್ಟುನಿಟ್ಟಿನ ತಾಕೀತು ಮಾಡಲಾಗಿದೆ. ಜೊತಗೆ ಸಾರ್ವಜನಿಕರು ಕೂಡ ತಮ್ಮ ಮನೆಗಳ ಸುತ್ತಲು ಸ್ವಚ್ಚತೆ



ಕಾಪಾಡಬೇಕು. ಯಾರಲ್ಲಾದರೂ ಅನಾರೋಗ್ಯದ ಲಕ್ಷಣಗಳು ಕಂಡಾಗ ವೈದ್ಯರನ್ನು ಸಂಪರ್ಕ ಮಾಡಿ ಸಲಹೆ ಪಡೆದುಕೊಳ್ಳಿ ಎಂದ ಅವರು ಇತ್ತಿಚಿನ ದಿನಗಳಲ್ಲಿ ಜನರಿಗೆ ಬಿಪಿ, ಶುಗರ್, ಹೃದ್ರೋಗ, ಕಿಡ್ನಿ ಖಾಯಿಲೆಗಳು ಹೆಚ್ಚು ಬಾಧಿಸುತ್ತಿವೆ. ಈ ಎಲ್ಲಾ ರೋಗಗಳು ಹೆಚ್ಚು ಹಣ ವ್ಯಯಿಸಿ ಚಿಕಿತ್ಸೆ ಪಡೆದುಕೊಳ್ಳುವಂತ ರೋಗಗಳಾಗಿವೆ. ಆದರೂ ಸರ್ಕಾರ ಬಡವರ ಅನುಕೂಲಕ್ಕಾಗಿ ಅನೇಕ ಖಾಯಿಲೆಗಳಿಗೆ ಉಚಿತವಾಗಿ ಚಿಕಿತ್ಸೆ ಕೊಡಿಸುತ್ತಿದೆ. ಆದರೂ ಜನ ತಮ್ಮ ಆರೋಗ್ಯದ ಕಾಳಜಿಯಿಂದ ಇಂತಹ ಆರೋಗ್ಯ ಶಿಬಿರಗಳಲ್ಲಿ ತಪಾಸಣೆ ಮಾಡಿಸಿಕೊಂಡು ಚಿಕಿತ್ಸೆ ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷ ನಿಂಗಣ್ಣ ಕಲಶೆಟ್ಟಿ, ಉಪಾಧ್ಯಕ್ಷೆ ಅನಸೂಬಾಯಿ ಬಬಲಾದ, ಮಾಜಿ ಗ್ರಾ.ಪಂ ಅಧ್ಯಕ್ಷ ದತ್ತು ಘಾಣೂರ, ಪಿಡಿಒ ಚಿದಾನಂದ ಆಲೆಗಾಂವ ಸೇರಿದಂತೆ ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಮತ್ತು ಗ್ರಾಮಸ್ಥರು ಇದ್ದರು.

## ಅಸಿಸ್ಟಂಟ್ ಮೆಡಿಕಲ್ ಆಫಿಸರ್ ಹುದ್ದೆಗೆ ನೇರ ಸಂದರ್ಶನ

**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಜಯಪುರದ ಕೃಷಿ ಮಹಾವಿದ್ಯಾಲಯದಲ್ಲಿ ಅಸಿಸ್ಟೆಂಟ್ ಮೆಡಿಕಲ್ ಆಫೀಸರ್ ಒಂದು ಹುದ್ದೆಗೆ ತಾತ್ಕಾಲಿಕ ನೇಮಕ ಮಾಡಿಕೊಳ್ಳಲು ಜುಲೈ 30 ರಂದು ಬೆಳಗ್ಗೆ 10.30ಕ್ಕೆ ಸಂದರ್ಶನ ನಡೆಯಲಿದೆ ಎಂದು ಕೃಷಿ ಮಹಾವಿದ್ಯಾಲಯದ ಮುಖ್ಯಸ್ಥರು ತಿಳಿಸಿದ್ದಾರೆ.

ಶೈಕ್ಷಣಿಕ ಅರ್ಹತೆಯುಳ್ಳ ಅಭ್ಯರ್ಥಿಗಳು ಸಂದರ್ಶನಕ್ಕೆ ಬರುವಾಗ ತಮ್ಮ ವಿದ್ಯಾರ್ಹತೆಗೆ ಸಂಬಂಧಪಟ್ಟ ಎಲ್ಲ ಮೂಲ ದಾಖಲೆ ಹಾಗೂ ಎರಡು ಝರಾಕ್ಸ್ ಪ್ರತಿ ತಮ್ಮ ಭಾವಚಿತ್ರದೊಂದಿಗೆ ಅರ್ಜಿ ನಮೂನೆಗೆ ಲಗತ್ತಿಸಿ, ಸಂದರ್ಶನಕ್ಕೆ ಆಗಮಿಸುವಾಗ ತೆಗೆದುಕೊಂಡು ಬರುವುದು. ಯಾವುದೇ ಸಂದರ್ಭದಲ್ಲಿ ಅರ್ಜಿಯನ್ನು ಮುಂಗಡವಾಗಿ ಕಳುಹಿಸಬಾರದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08352-295411 ಮೊ:9008806739ನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆರ್ಯ-ವೈಶ್ಯ ನಿಗಮ: ವಿವಿಧ ಯೋಜನೆಯಡಿ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: 2023-24ನೇ ಸಾಲಿಗೆ ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಯಡಿಯಲ್ಲಿ ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 31 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ www.kacdc.karnataka.gov.in ಅಥವಾ ನಿಗಮದ ಸಹಾಯವಾಣಿ 944845111 ಸಂಪರ್ಕಿಸಬಹುದು ಎಂದು ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ತಿಪ್ಪನಗೌಡ ಕುಮಸಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜು.20ರಂದು ಕ್ಯಾಂಪಸ್ ಸಂದರ್ಶನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಆವರಣದಲ್ಲಿ ಜುಲೈ 20 ರಂದು ಬೆಳಗ್ಗೆ 10 ಗಂಟೆಗೆ ಐಟಿಐ ಪಾಸಾದ ಹಾಗೂ ಅಂತಿಮ ವರ್ಷದ ಪರೀಕ್ಷೆಗೆ ಹಾಜರಾದ ಅಭ್ಯರ್ಥಿಗಳಿಗೆ ಬೆಂಗಳೂರಿನ ಎಚ್ ಎ ಎಲ್ ವತಿಯಿಂದ ಅಪ್ರೆಂಟಿಶಿಪ್ ತರಬೇತಿಗಾಗಿ ಸಂದರ್ಶನ ನಡೆಯಲಿದೆ.

ಆಸಕ್ತ ಅಭ್ಯರ್ಥಿಗಳು ತಮ್ಮ ಶೈಕ್ಷಣಿಕ ಅರ್ಹತೆಯ ಪ್ರಮಾಣ ಪತ್ರಗಳೊಂದಿಗೆ ಭಾಗವಹಿಸಬಹುದಾಗಿದ್ದು, ಹೆಚ್ಚಿನ ಮಾಹಿತಿಗಾಗಿ ದೂ: 08352-260360, ಮೊಬೈಲ್ 9886437517 ಸಂಪರ್ಕಿಸುವಂತೆ ವಿಜಯಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಮೃತ ಸ್ವಾಭಿಮಾನಿ ಕುರಿಗಾಯಿ ಯೋಜನೆಯಡಿ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ವತಿಯಿಂದ ಅನುಷ್ಠಾನಗೊಳಿಸುತ್ತಿರುವ 2024-25ನೇ ಸಾಲಿನ ಅಮೃತ ಸ್ವಾಭಿಮಾನಿ ಕುರಿಗಾಯಿ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಜಿಲ್ಲೆಯ ಅರ್ಹ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳ ಸದಸ್ಯರಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯನ್ನು ದಿನಾಂಕ : 26-07-2024ರೊಳಗೆ ಸಹಾಯಕ ನಿರ್ದೇಶಕರು ಕರ್ನಾಟಕ ಕುರಿತು ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ವಿಜಯಪುರ ಕಚೇರಿಗೆ ಸಲ್ಲಿಸಬೇಕು. ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ವಿಜಯಪುರ ಮೊ: 9902363143 ಸಂಖ್ಯೆಗೆ ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

## ಜು.17ರಂದು ಎಸ್.ಎಮ್.ಎನ್. ಗ್ರಾಹಕರ ಸಭೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಎಸ್.ಎಂ.ಎನ್. ಕ್ರೆಡಿಟ್ ಸೌಹಾರ್ದ ಸಹಕಾರಿ ನಿಯಮಿತದಿಂದ ವಂಚಿತಗೊಂಡ ಗ್ರಾಹಕರ ಸಭೆಯನ್ನು ವಿಜಯಪುರ ಗಗನಮಹಲ್ ದಲ್ಲಿ ಜು.17, ಬುಧವಾರದಂದು ಬೆಳಗ್ಗೆ 11 ಗಂಟೆಗೆ ಕರೆಯಲಾಗಿದೆ. ಈ ಸಭೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಕರೆಯಲಾದ ಕ್ಲೇಮಗೆ ಅರ್ಜಿ ಆಹ್ವಾನ ಸೇರಿದಂತೆ ವಿವಿಧ ಮಹತ್ವದ ವಿಷಯಗಳನ್ನು ಚರ್ಚೆ ಮಾಡಲಾಗುವದು ಎಂದು ಎಸ್.ಎಂ.ಎನ್. ಕ್ರೆಡಿಟ್ ಸೌಹಾರ್ದ ಸಹಕಾರಿ ನಿಯಮಿತದ ವಂಚಿತ ಗ್ರಾಹಕರ ಹೋರಾಟ ಸಮಿತಿಯ ಅಧ್ಯಕ್ಷ ಅರವಿಂದ ಕುಲಕರ್ಣಿ ಹಾಗೂ ಹೋರಾಟದ ಸಮಿತಿಯ ಸದಸ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR